# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 240 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–04–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 240 | Title- Code: KARKAN 28269 | Chitradurga | Date: 12-04-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ದಾವಣಗೆರೆ ಲೋಕಸಭೆ: ಇಂದಿನಿಂದ ನಾಮಪತ್ರ ಸಲ್ಲಿಕೆ 2

ಹೊಳಲ್ಕೆರೆ ಗ್ರಾಮೀಣ ಪ್ರದೇಶದಲ್ಲಿ ಆಕ್ರಮ ಮಣ್ಣು ದಂಧೆ 3

ಚುನಾವಣೆ ಮುಗಿದ ಗ್ಯಾರೆಂಟಿ ಮೂಲೆಗುಂಪು: ಕಾರಜೋಳ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

ಮುಸ್ಲಿಂ ಸಮುದಾಯದ ಬಂಧುಗಳಿಮದ ಈದ್ಗಾ ಮೈದಾನದಲ್ಲಿ ಶಾಸಕ ಟಿ.ರಘುಮೂರ್ತಿಯಿಂದ ಶುಭಾಶಯ ವಿನಿಮಯ

# ರಂಜಾನ್: ಸಾಮೂಹಿಕ ಪ್ರಾರ್ಥನೆ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಬೆಂಗಳೂರು ರಸ್ತೆಯ ಈದ್ಗಾ ಮೈದಾನದಲ್ಲಿ ನಗರದ ಸಾವಿರಾರು ಮುಸ್ಲಿಂ ಬಾಂಧವರು ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಹಬ್ಬವನ್ನು ಸಂಭ್ರಮ, ಸಡಗರಗಳಿಂದ ಆಚರಿಸಿದರು.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ ನಂತರ ಮುಸ್ಲಿಂ ಸಮುದಾಯದಬಂಧುಗಳಿಗೆರಂಜಾನ್ ಶುಭಾಶಯಕೋರಿದರು. ಒಂದು ತಿಂಗಳ ಕಾಲ ಉಪವಾಸ ನಂತರ ನೀವೆಲ್ಲರೂ ಭಕ್ತಿ, ಶ್ರದ್ದೆಯಿಂದ ಇಲ್ಲಿಗೆ ಆಗಮಿಸಿ ಅಲ್ಲಾಲನ್ನು ಪ್ರಾರ್ಥಿಸಿದ್ದೀರಿ, ಎಲ್ಲಾ ಧರ್ಮಗಳು ಧಾರ್ಮಿಕ ಜಾಗೃತಿ ಮೂಡಿಸುವ ಕಾರ್ಯವನ್ನು ನಿರಂತರ ಮಾಡುತ್ತಿವೆ. ನಗರದ ಗಾಂಧಿನಗರ, ಅಂಬೇಡ್ಕರ್ ನಗರ, ಸೂಜಿಮಲ್ಲೇಶ್ವರ ನಗರ, ಹಳೇಟೌನ್, ರಹೀಂನಗರ, ಶಾಂತಿನಗರ, ಸೋಮಗುದ್ದುರಸ್ತೆ ಮುಂತಾದ ಕಡೆಗಳಿಂದ ಬೆಳಗ್ಗೆ ಜಾಮೀಯ ಮಸೀದಿಯಲ್ಲಿ ಸೇರಿ ಅಲ್ಲಿಂದ ಮೆರವಣಿಗೆಯ ಮೂಲಕ ನೆಹರೂ ವೃತ್ತ, ಬಸವೇಶ್ವರ ವೃತ್ತದ ಮೂಲಕಈದ್ಗಾಮೈದಾನತಲುಪಿದರು. ಮುಸ್ಲಿಂ ಮುಖಂಡರಾದ ನೂರುಲ್ಲಾ ಮೌಲಾನ, ಅತಿಕೂರ್‌ರೆಹಮಾನ್, ಅನ್ವರ್‌ಮಾಸ್ಟರ್, ಸೈಯದ್, ಮುಜೀಬ್, ಬಿ.ಫರೀದ್‌ಖಾನ್, ಇಮ್ರಾನ್‌ಖಾನ್, ದಾದಾಪೀರ್, ನಯಾಜ್, ಖಾದರ್, ಸಲೀಂ, ಸ್ವಾಲೇಹ, ಎಂ.ಚೇತನ್‌ಕುಮಾರ್, ಬಿ.ಟಿ.ರಮೇಶ್‌ಗೌಡ ಮುಂತಾದವರು ಉಪಸ್ಥಿತರಿದ್ದರು.





# ರಂಜಾನ್ ತ್ಯಾಗ, ಪ್ರೀತಿ, ಶಾಂತಿಯ ಸಂಕೇತ: ಚಂದ್ರಪ್ಪ

» ಚಿತ್ರದುರ್ಗ

ಚಿತ್ರದುರ್ಗದ ಜಾಮಿಯಾ ಈದ್ಗಾ, ಕೊಹಿನೂರ್ ಈದ್ಗಾ, ತಬ್ಲೀಗಿ ಜಮಾದ್ ಈದ್ಗಾ ಮೈದಾನದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಸೇರಿದ್ದ ಅಪಾರ ಸಂಖ್ಯೆಯ ಮುಸ್ಲಿಂ ಬಾಂಧವರ ಜೊತೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಭಾಗವಹಿಸಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.ನಂತರ ಮಾತನಾಡಿದ ಬಿ.ಎನ್. ಚಂದ್ರಪ್ಪ, ಎಲ್ಲ ಧರ್ಮಗಳ ಆಶಯವೂ ಶಾಂತಿ, ಸೌಹಾರ್ದದಿಂದ ಇರಬೇಕು ಎನ್ನುವುದನ್ನು ತಿಳಿಸುವುದೇ ಆಗಿದೆ. ಅದನ್ನು ಎಲ್ಲರೂ ಪಾಲಿಸಬೇಕು. ಯಾವುದೇ ಧರ್ಮವೂ ಇನ್ನೊಂದು ಧರ್ಮಕ್ಕೆ ಕೇಡು ಬಯಸುವುದಿಲ್ಲ. ಎಲ್ಲ ಧರ್ಮಗಳು ಸಹೋದರತ್ವವನ್ನೇ ಸಾರಿವೆ ಮತ್ತು ಉತ್ತಮ ವಿಚಾರಗಳನ್ನು ಹೇಳಿವೆ. ಈ ಸೌಹಾರ್ದ ಪರಂಪರೆಯನ್ನು ಎಲ್ಲರೂ ಮುಂದುವರಿಸಿಕೊಂಡು ಹೋಗಬೇಕು ಎಂದು ಸಲಹೆ ನೀಡಿದರಲ್ಲದೆ ಸಮಾಜದಲ್ಲಿ ಪ್ರತಿಯೊಬ್ಬರೂ ಸಹಬಾಳ್ವೆಯಿಂದ ಬದುಕಬೇಕು ಎಂದರು.ಈ ಸಂದರ್ಭದಲ್ಲಿ ಚಿತ್ರದುರ್ಗ ಶಾಸಕರಾದ ವೀರೇಂದ್ರ ಪಪ್ಪಿ,ಡಿಸಿಸಿ ಅಧ್ಯಕ್ಷರಾದ ತಾಜ್ ಪೀರ್ ವಕ್ಫ್ ಬೋರ್ಡ್ ಅಧ್ಯಕ್ಷರಾದ ಅನ್ವರ್, ಎ ಸಿ ಓ ಬಾಬು,ತಾಜ್ ಪೀರ್,ಮುಹೀಬ್ ಉಲ್ಲಾ, ಅಲ್ಲಾ ಬಕ್ಷಿ, ಖಾಸಿಂ ಅಲಿ, ಅನೀಸ್,ಖುದ್ದೂಸ್ ಹಾಗು ಅನೇಕ ಮುಸ್ಲಿಂ ಮುಖಂಡರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಬೆಂಗಳೂರು ರಸ್ತೆಯ ಈದ್ಗಾ ಮೈದಾನದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಮುಸ್ಲಿಂ ಬಾಂಧವರು ಹಮ್ಮಿಕೊಂಡಿದ್ದ ಸಾಮೂಹಿಕ ಪ್ರಾರ್ಥನೆಯಲ್ಲಿ ಶಾಸಕ ಟಿ.ರಘುಮೂರ್ತಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮಾದಿಗ ಮುಖಂಡರ ಸಭೆಗೆ ಸಚಿವ ಮುನಿಯಪ್ಪ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರ ಚುನಾವಣಾ ಪ್ರಚಾರದಲ್ಲಿ ಸಕ್ರೀಯವಾಗಿ ಭಾಗವಹಿಸಿ ಜಯಶೀಲರನ್ನಾಗಿ ಮಾಡುವ ಉದ್ದೇಶದಿಂದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಮಾದಿಗ ಸಮುದಾಯುದ ಮುಖಂಡರ ಸಭೆಯನ್ನು ಸಮುದಾಯದ ಅಗ್ರ ಗಣ್ಯನಾಯಕ ಹಿರಿಯ ಕಾಂಗ್ರೆಸ್ ಮುಖಂಡ, ಮಾಜಿ ಸಚಿವರಾದ ಹೆಚ್. ಆಂಜನೇಯ ಇವರ ನೇತೃತ್ವದಲ್ಲಿ ಏ. 12 ಶುಕ್ರವಾರ ಬೆಳಗ್ಗೆ 10 ಗಂಟೆಗೆ ನಗರದ ಎನ್.ಬಿ.ಟಿ.ಫಂಕ್ಷನ್ ಹಾಲ್, ಆಜಾದ್ ಮಿಲ್ ಎದುರು, ರೈಲ್ವೆ ಸ್ಟೇಷನ್ ಹತ್ತಿರ ಸಭೆ ಕರೆಯಲಾಗಿದೆ. ಸಭೆಗೆ ಸಚಿವ ಕೆ.ಎಚ್. ಮುನಿಯಪ್ಪ ಕ್ಷೇತ್ರದ ಶಾಸಕರ, ಸಚಿವರ, ಸರ್ವ ಜನಾಂಗದ ಒಮ್ಮತದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ಅಧ್ಯಕ್ಷರಾದ ಜಿ.ಎಸ್. ಮಂಜುನಾಥ್, ಕೆಪಿಸಿಸಿ. ಪ್ರಧಾನ ಕಾರ್ಯದರ್ಶಿ ಡಾ.ಬಿ.ತಿಪ್ಪೇಸ್ವಾಮಿ ಜೆ.ಜೆ.ಹಟ್ಟಿ, ಲಿಡ್ಕರ್ ಮಾಜಿ ಅಧ್ಯಕ್ಷರಾದ ಓ.ಶಂಕರ್, ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ (ಲಿಡ್ಕರ್) ಅಧ್ಯಕ್ಷರಾದ ಮುಂಡರಗಿ ನಾಗರಾಜ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರಾದ ಸವಿತ ರಘು ಇವರುಗಳಲ್ಲದೆ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರು ಮತ್ತು ಮಾಜಿ ಸದಸ್ಯರು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷರು ಮತ್ತು ಸದಸ್ಯರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು, ಸದಸ್ಯರು ಮತ್ತು ಕೆಪಿಸಿಸಿ.. ಜಿಲ್ಲಾ ಕಾಂಗ್ರೆಸ್, ಬ್ಲಾಕ್ ಕಾಂಗ್ರೆಸ್ ಪದಾಧಿಕಾರಿಗಳು, ಎಸ್.ಸಿ.ಘಟಕದ ಪದಾಧಿಕಾರಿಗಳು ಹಾಗೂ ಮಾದಿಗ ಸಮುದಾಯದ ಎಲ್ಲಾ ಪ್ರಮುಖ ಹೋರಾಟಗಾರರು ಪಾಲ್ಗೊಳ್ಳಲಿದ್ದಾರೆ.







## ಫಾಸ್ಟ್ ನ್ಯೂಸ್

### ಪಿಯು ಫಲಿತಾಂಶ ಜಿಲ್ಲೆಯ ವಿದ್ಯಾರ್ಥಿಗಳ ಉತ್ತಮ ಸಾಧನೆ

» **ಚಿತ್ರದುರ್ಗ**

ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು ಚಿತ್ರದುರ್ಗ ಜಿಲ್ಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದಾರೆ. ಕಲಾ ವಿಭಾಗದಲ್ಲಿ ಚಳ್ಳಕೆರೆ ತಾಲೂಕು ನಾರಾಯಣಪುರ ಗ್ರಾಮದ ಎಸ್.ಎಲ್.ಹೆಚ್.ಆರ್ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಅರ್ಚಿತ.ಜಿ 600 ಅಂಕಗಳಿಗೆ 582 ಅಂಕಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಮೊಳಕಾಲ್ಮೂರು ತಾಲೂಕಿನ ಚಿಕ್ಕೋಬನಹಳ್ಳಿ ಗ್ರಾಮದ ಶ್ರೀ ಆಂಜನೇಯ ಪಿಯು ಕಾಲೇಜಿನ ವಿದ್ಯಾರ್ಥಿನಿ ಅಲ್ಲಿಯಾ ಬಾನು.ಇ 579 ಹಾಗೂ ಹೊಸದುರ್ಗ ನಗರದ ಎಸ್.ಜೆ.ಎಂ ಸ್ವತಂತ್ರ ಪಿಯು ಕಾಲೇಜಿನ ವಿದ್ಯಾರ್ಥಿ ಶರತ್ ಕುಮಾರ್ 573 ಅಂಕಗಳಿಸಿ ಅನುಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಚಳ್ಳಕೆರೆ ನಗರದ ಶ್ರೀ ವಾಸವಿ ಪಿಯು ಕಾಲೇಜಿನ ವಿದ್ಯಾರ್ಥಿ ಸೈಯದ್ ಫಯಾಜ್ ಖಾನ್.ಕೆ 600 ಅಂಕಗಳಿಗೆ 593 ಅಂಕಗಳಿಸಿ ಪ್ರಥಮ ಸ್ಥಾನ ಗಳಿಸಿದ್ದಾನೆ. ಚಿತ್ರದುರ್ಗ ಸಮೀಪದ ಸಿಬಾರದ ಗುತ್ತಿನಾಡು ನಿಲಯದ, ವಿಶ್ವ ಮಾನವ ಸಂಯುಕ್ತ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ರಮ್ಯಾ.ಡಿ.ಎಸ್ 584 ಹಾಗೂ ಹಿರಿಯೂರು ತಾಲೂಕಿನ ನಂದಿಹಳ್ಳಿ ಆದಿವಾಲ ಗ್ರಾಮದ ಏನಿಸಿಯನಟ್ ಪಿಯು ಕಾಲೇಜಿನ ವಿದ್ಯಾರ್ಥಿನಿ ಜನ್ನುನ್ನಿಸ್ಸಾ.ಡಿ 583 ಅಂಕಗಳಿಸಿ ಅನುಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಚಿತ್ರದುರ್ಗ ನಗರದ ಶ್ರೀರಂಗನಾಥ ಪಿಯು ಕಾಲೇಜಿನ ವಿದ್ಯಾರ್ಥಿನಿ ಐಶ್ವರ್ಯ.ಜಿ.ಟಿ 600 ಅಂಕಗಳಿಗೆ 587 ಅಂಕಗಳನ್ನು ಗಳಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. ನಗರದ ಎಸ್ ಆರ್ ಎಸ್ ಪಿಯು ಕಾಲೇಜಿನ ವಿದ್ಯಾರ್ಥಿನಿ ನೇಹ.ಎಸ್ 586 ಹಾಗೂ ಚಿನ್ಮೂಲಾದ್ರಿ ಪಿಯು ಕಾಲೇಜಿನ ವಿದ್ಯಾರ್ಥಿನಿ ಹುಸೇನ್ ಗರಿ ದಾಫಿಯಾ 585 ಅಂಕ ಗಳಿಸಿ ಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ. ಯಾರ್ಂಕ್ ಪಡೆದ ವಿದ್ಯಾರ್ಥಿಗಳಲ್ಲಿ ವಿದ್ಯಾರ್ಥಿನಿಯರೇ ಮೇಲುಗೈ ಸಾಧಿಸಿದ್ದಾರೆ.

### ಪೋಲೀಸ್ ಹೆಡ್ ಕಾನ್ಸ್‌ಟೇಬಲ್ ಮಗಳು ಕಾಲೇಜಿಗೆ ಟಾಪರ್



» **ಹೊಸದುರ್ಗ**

2023-24 ರಲ್ಲಿ ನಡೆದ ಪಿ.ಯು.ಸಿ.ಪರೀಕ್ಷೆಯಲ್ಲಿ ಪಟ್ಟಣದ ಎಸ್.ನಿಜಲಿಂಗಪ್ಪ ಪಿ.ಯು ಕಾಲೇಜಿಗೆ ವಿಜ್ಞಾನ ವಿಭಾಗದಲ್ಲಿ ಶೇ.97.74 ರಷ್ಟು ಫಲಿತಾಂಶ ಲಭಿಸಿದ್ದು ಒಟ್ಟು 133 ವಿದ್ಯಾರ್ಥಿಗಳಲ್ಲಿ 130 ವಿದ್ಯಾರ್ಥಿಗಳು ತೇರ್ಗಡೆಹೊಂದಿದ್ದು ಡಿಸ್ಟಿಂಗ್ಷನ್ 51, ಫಸ್ಟ್ ಕ್ಲಾಸ್ 71. ದ್ವಿತೀಯ 6 ಹಾಗೂ ತೃತಿಯ 2 ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದು ವಾಣಿಜ್ಯ ವಿಭಾಗದಲ್ಲಿ ಒಟ್ಟು 38 ವಿದ್ಯಾರ್ಥಿಗಳಲ್ಲಿ 36 ವಿದ್ಯಾರ್ಥಿಗಳು ತೇರ್ಗಡೆಹೊಂದಿದ್ದು ಡಿಸ್ಟಿಂಗ್ಷನ್ 16, ಫಸ್ಟ್ ಕ್ಲಾಸ್ 17. ದ್ವಿತೀಯ 3 ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ ಎಂದು ಕಾಲೇಜಿನ ಕಾರ್ಯದರ್ಶಿ ಕೆ.ಎಸ್.ಕಲ್ಮಠ್ ತಿಳಿಸಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಆಕಾಂಕ್ಷ ಬಿ.ಎಂ. ಈ ವಿದ್ಯಾರ್ಥಿನಿ 600 ಕ್ಕೆ 583 ಶೆ(97.17) ಅಂಕಗಳನ್ನನು ಪಡೆದು ಕಾಲೇಜಿಗೆ ಟಾಪರ್ ಆಗಿದ್ದು ಈ ವಿದ್ಯಾರ್ಥಿನಿ ಪಟ್ಟಣದ ಪೋಲಿಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೆಡ್ ಕಾನ್ಸ್‌ಟೇಬಲ್ ಬಿ.ಜೆ ಮಂಜುನಾಥ್ ಹಾಗೂ ಶ್ರೀಮತಿ ಶ್ವೇತ ಅವರ ಪುತ್ರಿ

### ದ್ವಿತೀಯ ಪಿಯುಸಿ ಫಲಿತಾಂಶ: ವಾಸವಿ ಕಾಲೇಜಿಗೆ ಶೇ.99 ಸಾಧನೆ

» **ಚಳ್ಳಕೆರೆ**

ಇತ್ತೀಚೆಗೆ ಪ್ರಕಟವಾದ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶದಲ್ಲಿ ನಗರದ ವಾಸವಿ ಪದವಿಪೂರ್ವ ಕಾಲೇಜು ಶೇ.99.37ರಷ್ಟು ಪ್ರಗತಿದಾಖಲಿಸಿದೆ ಎಂದು ಪ್ರಾಂಶುಪಾಲ ಶಿವಾರೆಡ್ಡಿ ತಿಳಿಸಿದರು. ಈ ಬಗ್ಗೆ ಮಾಹಿತಿ ನೀಡಿದ ಅವರು, ವಿಜ್ಞಾನ ವಿಭಾಗದಲ್ಲಿ ಒಟ್ಟು 142 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಅಪೈಕಿ ಎಲ್ಲರೂ ಉತ್ತೀರ್ಣರಾಗಿ ಶೇ.99.60, ವಾಣಿಜ್ಯ ವಿಭಾಗದಲ್ಲಿ 98.61 ಫಲಿತಾಂಶ ದಾಖಲು ಮಾಡಲಾಗಿದೆ.



ಪಿಸಿಎಂಬಿ ವಿಭಾಗದ ವಿದ್ಯಾರ್ಥಿನಿ ಕೆ.ಎಲ್.ಪಾವನಿ 577 ಅಂಕ ಪಡೆದು ಶೇ.96ರಷ್ಟು ಫಲಿತಾಂಶ ಪಡೆದಿದ್ದಾಳೆ. ವಕೀಲ ಜಡೇಕುಂಟೆಕುಮಾರ್, ಪತ್ನಿ ಲಲಿತಮ್ಮ ದಂಪತಿಗಳ ದಂಪತಿಗಳ ಪುತ್ರಿಯಾಗಿದ್ದು, ತನ್ನ ಸಾಧನೆಗೆ ಉತ್ತಮ ಬೋಧನೆ, ಪೋಷಕರು ಹಾಗೂ ಸ್ನೇಹಿತೆಯರ ಸಹಕಾರ ಕಾರಣ ಎಂದಿದ್ದಾರೆ.

**ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಾಮಪತ್ರ ಸಲ್ಲಿಕೆ – ಚುನಾವಣಾಧಿಕಾರಿ ಡಾ; ವೆಂಕಟೇಶ್ ಮಾಹಿತಿ**

# ದಾವಣಗೆರೆ ಲೋಕಸಭೆ: ಇಂದಿನಿಂದ ನಾಮಪತ್ರ

» **ದಾವಣಗೆರೆ**

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ದೇಶದ ಮೂರನೇ ಹಂತ, ರಾಜ್ಯದಲ್ಲಿ ಎರಡನೇ ಹಂತದ ಚುನಾವಣೆ ನಡೆಯುತ್ತಿದ್ದು ಏಪ್ರಿಲ್ 12 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮಾಹಿತಿ ನೀಡಲು ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ ಕರ್ತವ್ಯ ದಿನಗಳಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯರೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ಥಾಪಿಸಿರುವ ಚುನಾವಣಾಧಿಕಾರಿಗಳ ಸಭಾಂಗಣದಲ್ಲಿ ನಾಮಪತ್ರ ಸಲ್ಲಿಸಬಹುದಾಗಿದೆ. ಜಿಲ್ಲಾಧಿಕಾರಿಯವರು ಚುನಾವಣಾಧಿಕಾರಿಯಾಗಿದ್ದು ಅಪರ ಜಿಲ್ಲಾಧಿಕಾರಿ ಸಹಾಯಕ ಚುಣಾವ ಣಾಧಿಕಾರಿಯಾಗಿರುವರು. ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 19 ಕೊನೆಯ ದಿನವಾಗಿರುತ್ತದೆ.

ನಾಮಪತ್ರ ಸಲ್ಲಿಸಲು ರಾಷ್ಟ್ರೀಕೃತ, ಮಾನ್ಯತೆ ಪಡೆದ ಪಕ್ಷಗಳ ಅಭ್ಯರ್ಥಿಗಳು ಇದೇ ಕ್ಷೇತ್ರದ ಮತದಾರರಾದ ಒಬ್ಬರು ಸೂಚಕರಾಗಿರಬೇಕು. ಮಾನ್ಯತೆ ಪಡೆಯದ ಹಾಗೂ ಪಕ್ಷೇತರರಾಗಿ ನಾಮಪತ್ರ ಸಲ್ಲಿಸುವ ಅಭ್ಯರ್ಥಿಗಳು ಇದೇ ಕ್ಷೇತ್ರದ 10 ಮತದಾರರು ಸೂಚಕರಾಗಿರಬೇಕು. ಸಾಮಾನ್ಯ ವರ್ಗದವರು ರೂ.25000 ಮತ್ತುಪ.ಜಾತಿ,ಪ.ಪಂಗಡದಅಭ್ಯರ್ಥಿಗಳು ರೂ.12500 ಗಳನ್ನು ನಗದಾಗಿ ಮಾತ್ರ ಠೇವಣಿ ಸಲ್ಲಿಸಬೇಕಾಗುತ್ತದೆ. ಒಬ್ಬ ಅಭ್ಯರ್ಥಿಯು ಗರಿಷ್ಠ 4 ನಾಮಪತ್ರ ಮತ್ತು ಎರಡು ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಸಲು ಅವಕಾಶ ಇದೆ. ಚುನಾವಣಾ ಅಭ್ಯರ್ಥಿಯಾಗಲು ಕನಿಷ್ಠ 25 ವರ್ಷ ತುಂಬಿರಬೇಕು.

ನಾಮಪತ್ರ ಸಲ್ಲಿಸುವ ಅಭ್ಯರ್ಥಿಗಳಿಗೆ ಚುನಾವಣಾ ಕಚೇರಿಯ 100 ಮೀಟರ್ ವ್ಯಾಪ್ತಿಗೆ ಆಗಮಿಸಲು 3 ವಾಹನಗಳಿಗೆ ಅವಕಾಶ ಇರುತ್ತದೆ. ಮತ್ತು ನಾಮಪತ್ರ ಸಲ್ಲಿಸುವಾಗ ಒಂದು ಭಾರಿಗೆ ಅಭ್ಯರ್ಥಿ ಸೇರಿ 5 ಜನರಿಗೆ ಮಾತ್ರ ಅವಕಾಶ ಇರುತ್ತದೆ. ನಮೂನೆ-26 ರಲ್ಲಿ 4 ಪ್ರತಿಗಳಲ್ಲಿ ಘೋಷಣಾ ಪ್ರಮಾಣಪತ್ರ ಸಲ್ಲಿಸಬೇಕಿದ್ದು ಎಲ್ಲಾ ಅಂಕಣಗಳ ಮಾಹಿತಿ ನೀಡಬೇಕು. ನಾಮಪತ್ರ ಸಲ್ಲಿಸುವ ಒಂದು ದಿನ ಮೊದಲು ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಅಭ್ಯರ್ಥಿ ಅಥವಾ ಚುನಾವಣಾ ಏಜೆಂಟರ ಜಂಟಿಯಾಗಿ ಖಾತೆ ತೆರೆಯಬಹುದು, ಕುಟುಂಬಸ್ಥರ ಹೆಸರಿನೊಂದಿಗೆ ಜಂಟಿ ಖಾತೆ ಇರಬಾರದು, ಅಭ್ಯರ್ಥಿಗಳ ಮೇಲೆ ಕ್ರಿಮಿನಲ್‌ಪ್ರಕರಣಗಳಿದ್ದಲ್ಲಿಮತದಾನಕ್ಕಿಂತ ಮೊದಲು ಮಾಧ್ಯಮಗಳಲ್ಲಿ ಮೂರು ಭಾರಿ ಪ್ರಚುರಪಡಿಸಿರಬೇಕೆಂದರು.

ನಾಮಪತ್ರಗಳ ಪರಿಶೀಲನೆಯು ಏಪ್ರಿಲ್ 20 ರಂದು ಬೆಳಗ್ಗೆ 11 ಗಂಟೆಯಿಂದ ಆರಂಭವಾಗಲಿದೆ. ಅಭ್ಯರ್ಥಿಗಳು ನಾಮಪತ್ರಗಳನ್ನು ವಾಪಸ್ ಪಡೆಯಲು ಏಪ್ರಿಲ್ 22 ರ ಮಧ್ಯಾಹ್ನ 3 ಗಂಟೆಯವರೆಗೆ ಅವಕಾಶ ಇರುತ್ತದೆ. ನಂತರ ಅಂತಿಮ ಕಣದಲ್ಲಿರುವ ಅಭ್ಯರ್ಥಿಗಳಿಗೆ ಚುನಾವಣಾ ಚಿನ್ಹೆಯನ್ನು ನೀಡುವ ಮೂಲಕ ಅಂತಿಮ ಕಣದಲ್ಲಿನ ಅಭ್ಯರ್ಥಿಗಳ ವಿವರವನ್ನು ಪ್ರಕಟಿಸಲಾಗುತ್ತದೆ. ಮೇ 7 ರಂದು ಮತದಾನ ಮತ್ತು ಜೂನ್ 4 ರಂದು ಮತ ಎಣಿಕೆ ನಡೆಯಲಿದೆ ಎಂದರು.

ನಂ.13 ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ 8 ವಿಧಾನಸಭಾ ಕ್ಷೇತ್ರದ ಮತದಾರರು; ದಾವಣಗೆರೆ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಹರಪನಹಳ್ಳಿ ವಿಧಾನಸಭಾ ಕ್ಷೇತ್ರ ಸೇರಿ 8 ವಿಧಾನಸಭಾ ಕ್ಷೇತ್ರಗಳು ಒಳಪಡಲಿವೆ. ಇಲ್ಲಿ ಸಹಾಯಕ ಚುನಾವಣಾಧಿಕಾರಿಗಳು ಕಾರ್ಯನಿರ್ವಹಿಸುವರು.

ಜಗಳೂರು, ಹರಪನಹಳ್ಳಿ, ಹರಿಹರ, ದಾವಣಗೆರೆ ಉತ್ತರ, ದಕ್ಷಿಣ, ಮಾಯಕೊಂಡ, ಚನ್ನಗಿರಿ, ಹೊನ್ನಾಳಿ ವಿಧಾನಸಭಾ ಕ್ಷೇತ್ರಗಳು ಸೇರಿವೆ. ಎಲ್ಲಾ 8 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1946 ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗಿದೆ. ಇದರಲ್ಲಿ 387 ಕ್ರಿಟಿಕಲ್, 11 ವಲ್ನೇರಬಲ್ ಮತಗಟ್ಟೆಗಳಿವೆ.

ಈ ಎಲ್ಲಾ ಕ್ಷೇತ್ರಗಳಲ್ಲಿ ಏಪ್ರಿಲ್ 10 ರ ವರೆಗೆ 8,50,393 ಪುರುಷ, 8,55,079 ಮಹಿಳೆಯವರು, 135 ಇತರೆ ಹಾಗೂ 562 ಸೇವಾ ಮತದಾರರು ಸೇರಿ 17,06,169 ಒಟ್ಟು ಮತದಾರರಿದ್ದಾರೆ. ಏ.9 ರ ವರೆಗೆ ನಮೂನೆ-6 ರಲ್ಲಿ 42664 ಅರ್ಜಿಗಳು ಸ್ವೀಕೃತವಾಗಿದ್ದು ಪರಿಶೀಲನೆಯ ಹಂತದಲ್ಲಿವೆ ಎಂದರು.

ಮಾದರಿ ನೀತಿ ಸಂಹಿತೆ ಜಾರಿಗೆ ಕ್ರಮ; ಚುನಾವಣಾ ದಿನಾಂಕ ಪ್ರಕಟವಾದ ದಿನದಿಂದ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು ಜಿಲ್ಲೆಯಾದ್ಯಂತ ಚೆಕ್ ಪೋಸ್ಟ್, ಫ್ಲೈಯಿಂಗ್ ಸ್ಕ್ವಾಡ್, ಅಬಕಾರಿ ಜಾಗೃತ ದಳ, ವಾಣಿಜ್ಯ ತೆರಿಗೆ ಇಲಾಖೆ ತಂಡ ಸೇರಿದಂತೆ ಪೊಲೀಸ್ ಅಧಿಕಾರಿಗಳು ಒಟ್ಟು ರೂ. 1,81,26,926 ಮೌಲ್ಯದ ನಗದ ಮತ್ತು ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಇದರಲ್ಲಿ ಎಫ್‌ಎಸ್‌ಟಿಯಿಂದ ರೂ.75,62,100 ನಗದು ವಶ, ರೂ.91,39,836 ನಗದು ವಶ ಎಸ್‌ಎಸ್‌ಟಿಯಿಂದ, ಎಫ್. ಎಸ್.ಟಿ.ಯಿಂದ 400 ಟವರ್ ಫ್ಯಾನ್, 56.36 ಗ್ರಾಂ ಚಿನ್ನ, 579 ಸೀರೆಗಳನ್ನು ವಶಪಡಿಸಿಕೊಂಡಿದ್ದು ಇದರ ಮೌಲ್ಯ ರೂ.8,26,530 ಗಳಾಗಿರುತ್ತದೆ. ಚೆಕ್‌ಪೋಸ್ಟ್‌ಗಳಲ್ಲಿ 17 ಮೊಬೈಲ್, 300 ಜೀನ್ಸ್ ಪ್ಯಾಂಟ್ ಸೇರಿ ರೂ.1,57,000 ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಇದಲ್ಲದೇ ಅಬಕಾರಿ ಇಲಾಖೆಯಿಂದ ರೂ.2,94,432 ಮೌಲ್ಯದ 709.145 ಲೀ ಮದ್ಯ ವಶಪಡಿಸಿಕೊಂಡಿದೆ. ಪೊಲೀಸ್ ಇಲಾಖೆಯಿಂದ ರೂ.1,47,028 ಮೌಲ್ಯದ 372.184 ಲೀ ಮದ್ಯ ವಶಪಡಿಸಿಕೊಂಡಿದ್ದು ಇಲ್ಲಿಯವರೆಗೆ 290 ಎಫ್‌ಐಆರ್ ದಾಖಲಿಸಲಾಗಿದೆ.

ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ಮುಕ್ತ, ನ್ಯಾಯ ಸಮ್ಮತ ಚುನಾವಣೆ ನಡೆಸಲು ಕಾನೂನು ಬಾಹಿರವಾಗಿ ಬೆದರಿಕೆ ಒಡ್ಡಬಹುದಾದ ರೌಡಿಶೀಟರ್ಸ್ 1300 ಬಾಂಡ್ ಓವರ್ ಮತ್ತು ಇನ್ನೂ 24 ಜನರನ್ನು ಗುರುತಿಸಿ ಕ್ರಮ ಕೈಗೊಳ್ಳಲಾಗಿದೆ. 698 ಆಯುಧ ಪರವಾನಗಿ ನೀಡಿದ್ದು ಇದರಲ್ಲಿ 635 ವಾಪಸ್ ಪಡೆದು ಠೇವಣಿ ಮಾಡಿದ್ದು ಇನ್ನುಳಿದವರು ಭದ್ರತಾ ಕಾರಣಕ್ಕಾಗಿ ಅನುಮತಿಪಡೆದುಉಪಯೋಗಿಸುತ್ತಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿನ ದ್ವೇಷ ಭಾಷಣ ಸೇರಿದಂತೆ ಶಾಂತಿ ಕದಡುವ ಪೋಸ್ಟ್ ಹಾಕುವವರ ಮೇಲೆ ಸಂಪೂರ್ಣ ನಿಗಾವಹಿಸಲಾಗಿದ್ದು ಚುನಾವಣಾ ನಾಮಪತ್ರ ಸಲ್ಲಿಕೆ ವೇಳೆ ಸಂಪೂರ್ಣ ಬಂದೋಬಸ್ತ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಕಳೆದ ಲೋಕಸಭಾ ಚುನಾವಣೆಯಲ್ಲಿ ಶೇ 72.96 ರಷ್ಟು ಮತದಾನವಾಗಿತ್ತು. ಕಳೆದ ಭಾರಿ ಸರಾಸರಿಗಿಂತ ಶೇ 10 ಕ್ಕಿಂತ ಕಡಿಮೆ ಮತದಾನವಾದ 135 ಮತಗಟ್ಟೆಗಳ ವ್ಯಾಪ್ತಿಯಲ್ಲಿ ಈ ಭಾರಿ ಹೆಚ್ಚಿನ ಮತದಾನವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ಮತದಾನ ಕೇಂದ್ರಕ್ಕೆ ಆಗಮಿಸುವವರಿಗೆ ನೆರಳು, ಕುಡಿಯುವ ನೀರು, ವಿಶ್ರಾಂತಿ, ಶೌಚಾಲಯದ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಒಂದೇ ಕಟ್ಟಡದ ವ್ಯಾಪ್ತಿಯಲ್ಲಿ 3 ಮತ್ತು ಇದಕ್ಕಿಂತ ಹೆಚ್ಚು ಮತಗಟ್ಟೆಗಳಿದ್ದಲ್ಲಿ ಸಹಾಯಕ್ಕಾಗಿ ಸ್ವಯಂಸೇವಕರ ಪ್ರತ್ಯೇಕ ತಂಡ ರಚನೆ ಮಾಡಿ ಸಹಾಯ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಈ ಭಾರಿಯ ಚುನಾವಣೆಯಲ್ಲಿ ಶೇ 85 ಕ್ಕಿಂತ ಹೆಚ್ಚು ಮತದಾನವಾಗಲು ಹಲವಾರು ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ನಟರಾದ ಶೃತಿ ಪ್ರಹ್ಲಾದ್ ಮತ್ತು ಪೃಥ್ವಿ ಶಾಮನೂರು ನೇತೃತ್ವದಲ್ಲಿ ವಿನೂತನ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗುತ್ತದೆ ಎಂದರು.



### ಅಗತ್ಯ ಸೇವಾ ಇಲಾಖೆ

ಅಗತ್ಯ ಸೇವಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಅವಕಾಶ ಕಲ್ಪಿಸಿದ್ದು ಜಿಲ್ಲೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದು ಇಲ್ಲಿಯೇ ಮತದಾರರ ಪಟ್ಟಿಯಲ್ಲಿ ಹೆಸರಿರುವ 375 ಮತದಾರರು ಮತ್ತು ಇದೇ ಜಿಲ್ಲಾ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಬೇರೆ ಜಿಲ್ಲೆಯಲ್ಲಿ ಮತದಾನ ಮಾಡುತ್ತೇನೆ ಎಂದು 410 ಮತ್ತು ಇತರೆ ಬೇರೆ, ಬೇರೆ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ದಾವಣಗೆರೆ ಜಿಲ್ಲಾ ಮತದಾರರಾಗಿರುವ 550 ಅಗತ್ಯ ಸೇವಾ ಇಲಾಖೆ ಮತದಾರರು 12ಡಿ ಸಲ್ಲಿಸಿರುತ್ತಾರೆ. ಇದಲ್ಲದೇ ಮತದಾನ ದಿನ ಕರ್ತವ್ಯ ನಿರತಾಗುವ 2298 ಮತಗಟ್ಟೆ ಅಧ್ಯಕ್ಷಾಧಿಕಾರಿ, 2298 ಸಹಾಯಕ ಮತಗಟ್ಟೆ ಅಧ್ಯಕ್ಷಾಧಿಕಾರಿ, 4596 ಮತಗಟ್ಟೆ ಸಿಬ್ಬಂದಿಗಳು ಸೇರಿ ಒಟ್ಟು 9192 ಮತದಾನ ಸಿಬ್ಬಂದಿಗಳನ್ನು ಮತದಾನ ದಿನ ಚುನಾವಣಾ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದೆ ಎಂದ ಅವರು ಪಿಆರ್‌ಓ, ಎಪಿಆರ್‌ಓಗಳಿಗೆ ಮೊದಲ ಹಂತದ ತರಬೇತಿ ನೀಡಲಾಗಿದೆ ಎಂದರು. ಸಾರ್ವಜನಿಕರಿಂದ ದೂರು ಸ್ವೀಕರಿಸಲು ಸಿವಿಜಿಲ್, ಟೋಲ್‌ಫ್ರೀ; ಚುನಾವಣಾ ನೀತಿ ಸಂಹಿತೆ ಹಿನ್ನಲೆಯಲ್ಲಿ ಎಂಸಿಸಿ ಉಲ್ಲಂಘನೆಗೆ ಸಂಬಂಧಿಸಿದಂತೆ ದೂರುಗಳನ್ನು ಸಿವಿಜಿಲ್ ಆಪ್ ಮೂಲಕ 471 ದೂರುಗಳನ್ನು ಸ್ವೀಕರಿಸಲಾಗಿದೆ. ಇವುಗಳಲ್ಲಿ ಬಹುತೇಕ ನಾಮಫಲಕಗಳಲ್ಲಿ ಚುನಾಯಿತ ಪ್ರತಿನಿಧಿಗಳ ಹೆಸರಿದೆ ಎಂಬ ವಿಷಯಗಳಿವೆ. ಮತ್ತು 1950 ಉಚಿತ ಸಹಾಯವಾಣಿಗೆ 345 ಕರೆಗಳು ಬಂದಿದ್ದು ಚುನಾವಣೆಗೆ ಸಂಬಂಧಿಸಿದ, ಮತದಾರರ ಪಟ್ಟಿ, ಹೆಸರು ಸೇರ್ಪಡೆಗೆ ಸಂಬಂಧಿಸಿ ಕರೆಗಳಾಗಿದ್ದು ಕರೆ ಮಾಡಿದವರಿಗೆ ಮಾಹಿತಿ ನೀಡಲಾಗಿದೆ ಎಂದರು.

### ಮನೆಯಲ್ಲಿಯೇ ಮತದಾನ

ಆಯೋಗವು 85 ವರ್ಷಕ್ಕಿಂತ ಮೇಲ್ಪಟ್ಟವರು ಹಾಗೂ ವಿಶೇಷಚೇತನರಿಗೆ ಮನೆಯಲ್ಲಿಯೇ ಮತದಾನ ಮಾಡಲು ಅವಕಾಶ ನೀಡಿದ್ದು ಇವರಿಗೆ 12ಡಿ ವಿತರಣೆ ಮಾಡಲಾಗಿದ್ದು 85 ವರ್ಷ ಮೇಲ್ಪಟ್ಟ 12845 ಮತದಾರರಲ್ಲಿ 1473 ಮತದಾರರು ಮನೆಯಲ್ಲಿಯೇ ಮತದಾನ ಮಾಡುತ್ತೇವೆ ಎಂದು 12ಡಿ ನೀಡಿರುವರು. 22922 ವಿಶೇಷಚೇತನ ಮತದಾರರಲ್ಲಿ 876 ಮತದಾರರು ಮೆನಯಲ್ಲಿ ಮತದಾನ ಮಾಡುತ್ತೇವೆ ಎಂದು ಘೋಷಣಾ ಪತ್ರ ನೀಡಿರುತ್ತಾರೆ.

## ಕುರಿಗಾಯಿ ಮಗನಿಗೆ ಪಿಯುಸಿಯಲ್ಲಿ 562 ಅಂಕ

» **ಹೊಸದುರ್ಗ**

2023-24 ನೇ ಸಾಲಿನ ಪಿ.ಯು.ಸಿ ಪರೀಕ್ಷೆಯಲ್ಲಿ ಹೊಸದುರ್ಗ ತಾಲೂಕಿನ ಮಾಡದಕೆರೆ ಹೋಬಳಿಯ ಲಕ್ಕಿಹಳ್ಳಿ ಗ್ರಾಮದ ಕುರಿಗಾಯಿ ರಾಜಪ್ಪ ಎಂಬುವರ ಮಗ ಮುದ್ದುರಾಜ್.ಆರ್ 600 ಕ್ಕೆ 562 ಅಂಕಗಳನ್ನ (ಶೇ.93.6) ಪಡೆದಿದ್ದಾನೆ.ಪಟ್ಟಣದ ಆರ್.ಪಿ. ಪಿಯು ಕಾಲೇಜಿನಲ್ಲಿ ಓದುತ್ತಿದ್ದ ಮುದ್ದುರಾಜ್ ಉತ್ತಮ ಅಂಕಗಳನ್ನು ಗಳಿಸುವ ಮೂಲಕ ಕಾಲೇಜು ಆಡಳಿತ ಮಂಡಳಿ, ಪೋಷಕರು ಹಾಗೂ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರನಾಗಿದ್ದಾನೆ. ಉತ್ತಮ ಅಂಕಗಳನ್ನು ಪಡೆಯುವುದರ ಮೂಲಕ ಕಾಲೇಜಿಗೆ ಮತ್ತು ಕುಟುಂಬಕ್ಕೆ ಕೀರ್ತಿ ತಂದ ಮುದ್ದುರಾಜ್ ನನ್ನು ಕಾಲೇಜಿನ ಆಡಳಿತ ಮಂಡಳಿಯವರು ಮತ್ತು ಪೋಷಕರು ಅಭಿನಂದಿಸಿದ್ದಾರೆ.



ಲಕ್ಕಿಹಳ್ಳಿ ಗ್ರಾಮದ ಪರಿಶಿಷ್ಟ ಪಂಗಡಕ್ಕೆ ಸೇರಿರುವ ದ್ರಾಕ್ಷಾಯಣಮ್ಮ ಮತ್ತು ರಾಜಪ್ಪ ಎಂಬ ದಂಪತಿಗಳಿಗೆ 3 ಗಂಡು ಮಕ್ಕಳಿದ್ದು, ವಿದ್ಯಾರ್ಥಿ ಮುದ್ದುರಾಜು 2ನೇ ಮಗನಾಗಿದ್ದಾನೆ. ಇವರದು ಬಡ ಕುಟುಂಬವಾಗಿದ್ದು, ಕುರಿ ಕಾಯುವ ಕೆಲಸವೇ ಪ್ರಧಾನವಾಗಿದೆ. ಪೋಷಕರು ಕುರಿ ಕಾಯುವ ಕೆಲಸಮಾಡಿಕೊಂಡೆ ತಮ್ಮ ಮಗನಿಗೆ ಒಳ್ಳೆಯ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುತ್ತಿದ್ದಾರೆ.



ಚಿತ್ರದುರ್ಗ ನಗರದಲ್ಲಿ ಈದ್ಗಾ ಮೈದಾನದಲ್ಲಿ ಮುಸ್ಲಿಂರ ಸಾಮೂಹಿಕ ಪ್ರಾರ್ಥನೆ.

**ಪ್ರಮುಖ ಸುದ್ದಿ**

# ಸುಳ್ಳು ಮಾತಿನಿಂದ ಮೋಸ ಮಾಡುವ ಕಾರ್ಯ ನಡೆಯುತ್ತಿದೆ

» **ಚಿತ್ರದುರ್ಗ**

ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳರವರು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮತದಾರರನ್ನು ಸುಳ್ಳು ಮಾತುಗಳಿಂದ ಮೋಸವನ್ನು ಮಾಡುವ ಕಾರ್ಯವನ್ನು ಮಾಡುತ್ತಿದ್ದಾರೆ. ಇದನ್ನು ನಂಬಿ ಮತದಾರರು ಮತವನ್ನು ನೀಡುತ್ತಾರೆ ಎಂದು ಕನಸು ಕಾಣುವುದನ್ನು ಬಿಡಬೇಕಿದೆ. 500 ಕಿ.ಮೀ.ದೂರದಿಂದ ಬಂದಿರುವ ಅವರನ್ನು ಮತದಾರರು ಗೋ ಬ್ಲಾಕ್ ಎನ್ನುತ್ತಿದ್ದಾರೆ ಎಂದು ಕೆಪಿಸಿಸಿ ರಾಜ್ಯ ವಕ್ತಾರ ಬಾಲಕೃಷ್ಣ ಯಾದವ್ ತಿಳಿಸಿದರು.



ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ನಂತರ ದೇಶವನ್ನು ಆಳಿದ ಕಾಂಗ್ರೆಸ್ ಸರ್ಕಾರ ದೇಶವನ್ನು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಹೆಚ್ಚಿನ ಶ್ರಮವನ್ನು ಹಾಕಿದ್ದಾರೆ. ಚುನಾವಣೆಯನ್ನು ನ್ಯಾಯಯುತವಾಗಿ ಎದುರಿಸಿದ ಆದರೆ ತದ ನಂತರ ಬಂದ ಬಿಜೆಪಿ ಅಧಿಕಾರವನ್ನು ಹಿಡಿಯುವ ಸಲುವಾಗಿ ವಾಮಮಾರ್ಗವನ್ನು ಹಿಡಿದು ಅಧಿಕಾರವನ್ನು ಹಿಡಿದು ಸರ್ಕಾರವನ್ನು ನಡೆಸುತ್ತಿದೆ. ಇದ್ದಲ್ಲದೆ ಎಲ್ಲರಿಗೂ ಅಂಬೇಡ್ಕರ್ ನೀಡಿದ ಸಂವಿಧಾನವನ್ನು ಎಲ್ಲರು ಗೌರವಿಸಿದರೆ ಬಿಜೆಪಿ ಮಾತ್ರ ಅದನ್ನು ಬದಲಾಯಿಸುವ ಕಾರ್ಯವನ್ನು ಮಾಡಲು ಮುಂದಾಗಿರುವುದು ದುರಂತ ಎಂದರು.ಬಿಜೆಪಿಯಿಂದಸ್ಪರ್ಧೆಮಾಡಿರುವ ಕಾರಜೋಳರವರು ತಮ್ಮ ಕ್ಷೇತ್ರದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಅಭೀವೃದ್ಧಿಯನ್ನು ಮಾಡಿದ್ದೇನೆ ಎಂದು ಹೇಳಿರುವ ಅವರನ್ನು ಚುನಾವಣೆಯಲ್ಲಿ ಅಲ್ಲಿನ ಮತದಾರರು ಯಾಕೆ ಸೋಲಿಸಿದರು. ಈಗ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಮತದಾರರಿಗೆ ಸುಳ್ಳನ್ನು ಹೇಳುವುದರ ಮೂಲಕ ಈ ಕ್ಷೇತ್ರದ ಎಂ.ಪಿ.ಯಾಗಲು ಹೂರಟ್ಟಿದ್ದಾರೆ. ಇವರು ಬಿಜೆಪಿ ಸರ್ಕಾರದಲ್ಲಿ ಸಮಾಜ ಕಲ್ಯಾಣ, ಜಲ ಸಂಪನ್ಮೂಲ, ಸೇರಿದಂತೆ ವಿವಿಧ ಇಲಾಖೆಗಳ ಮಂತ್ರಿಯಾಗಿದ್ದರೆ ಸಮಯದಲ್ಲಿ ಚಿತ್ರದುರ್ಗಕ್ಕೆ ಇವರ ಕೂಡುಗೆ ಶೂನ್ಯವಾಗಿದೆ ಎಂದು ತಿಳಿಸಿದರು.

ಕಾರಜೋಳರವರು ತಮ್ಮ ಮಾತಿನ ಮೂಲಕ ಮತದಾರರಿಗೆ ತಪ್ಪು ಸಂದೇಶವನ್ನು ನೀಡುವುದರ ಮೂಲಕ ಜನರಿಗೆತಪ್ಪುಸಂದೇಶವನ್ನುನೀಡುತ್ತಿದ್ದಾರೆ. ಅಪ್ಪರ್ ಭದ್ರಾ ಯೋಜನೆಗೆ ಕೇಂದ್ರ ಸರ್ಕಾರ ಸಹಾಯ ಮಾಡುವ ರೀತಿಯಲ್ಲಿ ಧನಸಹಾಯ ಮಾಡುವುದಾಗಿ ಹೇಳಿತ್ತು ಆದರೆ ಇದರ ಬಗ್ಗೆ ಸಚಿವರಾಗಿದ್ದಾಗ ಯಾವ ಕೆಲಸವನ್ನು ಸಹಾ ಮಾಡಿಲ್ಲ, ಇದುವರೆವಿಗೂ ಕೇಂದ್ರ ಸರ್ಕಾರ ಒಂದು ನಯಾ ಪೈಸೆಯನ್ನು ಸಹಾ ಬಿಡುಗಡೆ ಮಾಡಿಲ್ಲ ಎಂದು ದೂರಿದರು.

ಕಾರಜೋಳ ರವರು ಸಚಿವರಾಗಿದ್ದಾಗ ಪರಿಶಿಷ್ಟ ಜಾತಿ, ಪಂಗಡದವರಿಗೆ ಮತ್ತು ಒಬಿಸಿಯವರಿಗೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ನೀಡುತ್ತಿದ್ದ ಹೆಚ್ಚಳ ಪ್ರಮಾಣದ ಸಹಾಯಧನವನ್ನು ಕಡಿಮೆ ಮಾಡಲಾಗಿದೆ ಇದರ ಬಗ್ಗೆ ಯಾವ ಮಾತನ್ನು ಸಹಾ ಆಡಿಲ್ಲ, ಅಪ್ಪರ್ ಭದ್ರಾ ಯೋಜನೆಯಲ್ಲಿ ಅವ್ಯವಹಾರವಾಗಿದೆ ಎಂದು ಅವರ ಶಾಸಕರೇ ಸಿಎಂ.ರವರಿಗೆ ಅಂದು ಪತ್ರವನ್ನು ಬರೆದಿದ್ದಾರೆ. ಇದರ ಬಗ್ಗೆ ಯಾವ ಮಾತನ್ನು ಸಹಾ ಆಡಿಲ್ಲ. ಇವರಿಗೆ ಎಸ್.ಸಿ.ಎಸ್.ಟಿ. ಹಾಗೂ ಓಬಿಸಿ ಯವರ ಬಗ್ಗೆ ಕಾಳಜಿಯನ್ನು ಹೊಂದಿಲ್ಲ, ಇವರ ಬಗ್ಗೆ ಏ.26 ರಂದು ಮತದಾರರು ನಿರ್ಣಯವನ್ನು ಮಾಡಲಿದ್ದಾರೆ ಜೂ.4 ರಂದು ನಿಮ್ಮ ಹಣೆ ಬರಹ ನಿರ್ಣಯವಾಗಲಿದೆ ಎಂದು ಭವಿಷ್ಯ ನುಡಿದರು.

ರಾಜ್ಯ ಸರ್ಕಾರ ತನ್ನ ಚುನಾವಣೆಯಲ್ಲಿ ಮತದಾರರಿಗೆ ನೀಡಿದ ಐದು ಗ್ಯಾರೆಂಟಿಗಳಂತೆ ಕೇಂದ್ರ ಕಾಂಗ್ರೆಸ್ ಪಕ್ಷವು ಸಹಾ ಈ ಬಾರಿ ತನ್ನ ಮತದಾರರಿಗೆ ಐದು ಗ್ಯಾರೆಂಟಿಗಳನ್ನು ನೀಡಿದೆ. ಇದರಲ್ಲಿ ಯವ ನ್ಯಾಯದಡಿ ಪ್ರತಿಯೊಬ್ಬ ವಿದ್ಯಾವಂತ ಯುವಕನಿಗೆ ಮೊದಲ ಉದ್ಯೋಗದ ಗ್ಯಾರೆಂಟಿಯಾಗಿ 1 ಲಕ್ಷ ವೇತನ, ಮಹಿಳಾ ನ್ಯಾಯದಡಿ ಪ್ರತಿ ಬಡ ಕುಟುಂಬದ ಒಬ್ಬ ಮಹಿಳೆಗೆ ಪ್ರತಿ ವರ್ಷ 1 ಲಕ್ಷ ರೂ. ರೈತ ನ್ಯಾಯದಡಿ ಸಾಲ ಮನ್ನಾ ಮತ್ತು ಸ್ವಾಮಿ ಸ್ವಾಮಿನಾಥನ್ ಆಯೋಗದ ಸೂತ್ರದ ಪ್ರಕಾರ ಎಂ.ಎಸ್.ಪಿ.ಗೆ ಕಾನೂನು ಸ್ಥಾನಮಾನ, ಶ್ರಮಿಕನ್ಯಾಯದಡಿ ದಿನಕ್ಕೆ 400 ನರೇಗಾ ಸೇರಿದಂತೆ ರಾಷ್ಟ್ರೀಯ ಕನಿಷ್ಠ ವೇತನ ಹಾಗೂ ಪಾಲುದಾರಿಕೆ ನ್ಯಾಯದಡಿ ಸಾಮಾಜಿಕ ಮತ್ತು ಅರ್ಥಿಕ ಸಮಾನತೆಯನ್ನು ಖಚಿತ ಪಡಿಸಿಕೊಳ್ಳಲು ರಾಷ್ಟ್ರ ವ್ಯಾಪ್ತಿ ಜನಗಣತಿಯಲ್ಲಿ ಪ್ರತಿಯೊಬ್ಬ ವ್ಯಕ್ತಿ ಮತ್ತು ಪ್ರತಿ ಸಮುದಾಯವನ್ನು ಪರಿಗಣಿಸಲಾಗುವುದು ಇದರಿಂದ ನಮ್ಮಲ್ಲಿನ ಸಂಪತ್ ಎಲ್ಲರಿಗೂ ಸಹಾ ತಲುಪಲಿದೆ ಎಂದರು.

## ಫಾಸ್ಟ್ ನ್ಯೂಸ್

### ಹೊಳಲ್ಕೆರೆಯಲ್ಲಿ ಇಂದು ಬಿಜೆಪಿ ಬೃಹತ್ ಸಮಾವೇಶ

» ಹೊಳಲ್ಕೆರೆ



ಇದೇ ತಿಂಗಳ 26 ರಂದು ನಡೆಯಲಿರುವ ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಪಟ್ಟಣದ ಕೊಟ್ರೆನಂಜಪ್ಪಪದವಿಪೂರ್ವ ಕಾಲೇಜು ಮೈದಾನದಲ್ಲಿ ಏ. 12 ರ ಇಂದು ಮಧ್ಯಾಹ್ನ 2 ಗಂಟೆಗೆ ಕಾರ್ಯಕರ್ತರ ಹಾಗೂ ಅಭಿಮಾನಿಗಳ ಬೃಹತ್ ಸಮಾವೇಶ ನಡೆಯಲಿದೆ. ಬಿಜೆಪಿ. ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಗೋವಿಂದ ಕಾರಜೋಳ, ಸಂಚಾಲಕ ಎನ್.ರವಿಕುಮಾರ್, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ ಇವರುಗಳು ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ. ಬಿಜೆಪಿ. ಕಾರ್ಯಕರ್ತರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಐತಿಹಾಸಿಕ ಸಮಾವೇಶವನ್ನು ಯಶಸ್ವಿಗೊಳಿಸುವಂತೆ ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಮನವಿ ಮಾಡಿದ್ದಾರೆ.

### ದ್ವಿತೀಯ ಪಿಯು ಫಲಿತಾಂಶ: ಎಸ್‌ಆರ್‌ಎಸ್ ಕಾಲೇಜು ಮೇಲುಗೈ

» ಚಳ್ಳಕೆರೆ




ನಗರದ ಎಸ್‌ಆರ್‌ಎಸ್ ಪದವಿಪೂರ್ವ ಕಾಲೇಜಿನಲ್ಲೂ ಸಹ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಶೇ. 95 ಸಾಧನೆ ಮಾಡಿದೆ ಎಂದು ಆಡಳಿತಾಧಿಕಾರಿ, ನಿವೃತ್ತ ಪ್ರಾಂಶುಪಾಲ ಪಿ.ಎನ್. ಕೃಷ್ಣಪ್ರಸಾದ್ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ವಿಜ್ಞಾನವಿಭಾಗದಲ್ಲಿ 151 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಶೇ. 95ರ ಸಾಧನೆ ದಾಖಲಿಸಿದ್ದಾರೆ. ವಾಣಿಜ್ಯವಿಭಾಗದಲ್ಲಿ 36 ವಿದ್ಯಾರ್ಥಿಗಳು ಪರೀಕ್ಷೆ ಬರೆದು ಶೇ. 98 ವಿದ್ಯಾರ್ಥಿಗಳು ಫಲಿತಾಂಶ ದಾಖಲಿಸಿದ್ದಾರೆ. ಕನ್ನಡ, ರಸಾಯನಶಾಸ್ತ್ರ, ಜೀವಶಾಸ್ತ್ರ, ಗಣಕವಿಜ್ಞಾನ ದಲ್ಲಿ ಒಟ್ಟು 13 ವಿದ್ಯಾರ್ಥಿಗಳು ಶೇ.100ರ ಅಂಕ ಗಳಿಸಿದ್ದಾರೆ. ಉತ್ತಮ ಫಲಿತಾಂಶ ದಾಖಲಿಸಿದ ಎಲ್ಲಾ ವಿದ್ಯಾರ್ಥಿಗಳನ್ನು ವಿದ್ಯಾಸಂಸ್ಥೆ ಅಧ್ಯಕ್ಷ ಲಿಂಗಾರೆಡ್ಡಿ, ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಪ್ರಾಂಶುಪಾಲ ಸತ್ಯನಾರಾಯಣ ಹಾಗೂ ಉಪನ್ಯಾಸಕರು ಅಭಿನಂದಿಸಿದ್ದಾರೆ.

### ಅಬಕಾರಿ ದಾಳಿ: ವಾಹನ ಸೇರಿ 65 ಸಾವಿರ ಮೌಲ್ಯದ ಮದ್ಯ ವಶ



» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾ ಅಬಕಾರಿ ಉಪಾಯುಕ್ತರ ನೇತೃತ್ವದಲ್ಲಿ ಹಿರಿಯೂರು ಉಪಅಧೀಕ್ಷರು, ಚಳ್ಳಕೆರೆ ವಲಯ ಅಬಕಾರಿ ನಿರೀಕ್ಷಕರ ಮಾರ್ಗದರ್ಶನದಲ್ಲಿ ಅಕ್ರಮ ಮದ್ಯ ಮಾರಾಟ ಪ್ರಕರಣಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದ್ದು, ಪಾವಗಡ ರಸ್ತೆಯ ಈಶ್ವರ ದೇವಸ್ಥಾನದ ಬಳಿ ಮೋಟಾರ್ ಬೈಕ್‌ನಲ್ಲಿ ಅಕ್ರಮ ಮದ್ಯ ಸಾಗಾಟ ಮಾಡುತ್ತಿದ್ದ ವ್ಯಕ್ತಿಯನ್ನು ವಶಕ್ಕೆ ಪಡೆದು ಪ್ರಕರಣದಾಖಲು ಮಾಡಲಾಗಿದೆ. ವಶಪಡಿಸಿಕೊಂಡ ಸುಮಾರು 8680 ಲೀಟರ್ ಮದ್ಯ ಅಂದಾಜು ಮೌಲ್ಯ 4480 ಆಗಿದ್ದು, ದ್ವಿಚಕ್ರವಾಹನ 65 ಸಾವಿರ ಮೌಲ್ಯದ್ದಾಗಿದ್ದು, ಆರೋಪಿ ದಾಳಿ ನಡೆಸಿದ ಕೂಡಲೇ ವಾಹನ ಹಾಗೂ ಮದ್ಯವನ್ನು ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದಾನೆ. ಅಕ್ರಮ ಮದ್ಯ ಹಾಗೂ ವಾಹನವನ್ನು ಅಬಕಾರಿ ಇಲಾಖೆ ಅಧಿಕಾರಿಗಳು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಕಾರ್ಯಚರಣೆಯಲ್ಲಿ ಅಬಕಾರಿ ನಿರೀಕ್ಷಕ ಸಿ.ನಾಗರಾಜು, ಅಬಕಾರಿ ಉಪನಿರೀಕ್ಷಕರಾದ ಡಿ.ಟಿ.ತಿಪ್ಪಯ್ಯ, ರೇಖಾ, ಮುಖ್ಯಪೇದೆಗಳಾದ ನಾಗರಾಜು, ಸೋಮಶೇಖರ್, ಮಂಜುಳಾ ಭಾಗವಹಿಸಿದ್ದರು.

### ಜೂಜಾಟ: 38230 ರೂ ಹಣ ವಶ

» ಚಳ್ಳಕೆರೆ

ಠಾಣಾ ವ್ಯಾಪ್ತಿಯಲ್ಲಿ ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಜೂಜಾಟ ಹಾಗೂ ಇನ್ನಿತರೆ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ಶ್ರಮಿಸುತ್ತಿದ್ದು, ಠಾಣಾ ವ್ಯಾಪ್ತಿಯ ಕಲಮರಹಳ್ಳಿ ಗ್ರಾಮದಲ್ಲಿ ಜೂಜಾಟವಾಡುತ್ತಿದ್ದ ತಂಡದ ಮೇಲೆ ದಾಳಿ ನಡೆಸಿ ಪ್ರಕರಣ ದಾಖಲಿಸಲಾಗಿದೆ. ಈ ಬಗ್ಗೆ ಮಾಹಿತಿ ನೀಡಿದ ಇನ್ಸ್‌ಪೆಕ್ಟರ್ ಕೆ.ಕುಮಾರ್, ಸಾರ್ವಜನಿಕ ಮಾಹಿತಿ ಮೇರೆಗೆ ಕಲಮರಹಳ್ಳಿ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಗುರುವಾರ ಮಧ್ಯಾಹ್ನ ರಾಜಣ್ಣ ಹಾಗೂ ಇತರೆಯವರು ಜೂಜಾಟವಾಡುತ್ತಿದ್ದು, ಪೊಲೀಸ್‌ರು ದಾಳಿ ನಡೆಸಿ 38230 ಹಣವನ್ನು ವಶಪಡಿಸಿಕೊಂಡಿದ್ದಾರೆ.

# 2014ರಲ್ಲಿ ಗೆದ್ದ ಚಂದ್ರಪ್ಪ ಸಾಧನೆ ಶೂನ್ಯ

» ಚಿತ್ರದುರ್ಗ



2014 ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಪಾರ್ಲಿಮೆಂಟ್ ಪ್ರವೇಶಿಸಿದ ಕಾಂಗ್ರೆಸ್‌ನ ಬಿ.ಎನ್.ಚಂದ್ರಪ್ಪನವರ ಸಾಧನೆ ಮಾತ್ರ ಶೂನ್ಯ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಆಪಾದಿಸಿದರು.

ಬಿಜೆಪಿ. ಜಿಲ್ಲಾಧ್ಯಕ್ಷ ಟಿ.ನರೇಂದ್ರನಾಥ್‌ರವರ ನಿವಾಸಕ್ಕೆ ಗುರುವಾರ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಬುದ್ದರು ಹಾಗೂ ಪ್ರಮುಖ ಉದ್ಯಮಿಗಳ ಜೊತೆ ಮಾತನಾಡಿದ ಗೋವಿಂದ ಕಾರಜೋಳರವರು ಹತ್ತು ವರ್ಷಗಳ ಕಾಲ ಪ್ರಧಾನಿಯಾಗಿ ದೇಶವನ್ನು ಸುರಕ್ಷಿತವಾಗಿ ಮನ್ನಡೆಸಿಕೊಂಡು ಹೋದ ನರೇಂದ್ರಮೋದಿರವರು 2023-24 ನೇ ಸಾಲಿನ ಬಜೆಟ್‌ನಲ್ಲಿ ಮಧ್ಯಕರ್ನಾಟಕದ ಬಯಲುಸೀಮೆ ಚಿತ್ರದುರ್ಗಕ್ಕೆ ನೀರು ಒದಗಿಸುವ ಅಪ್ಪರ್‌ಭದ್ರಾ ಯೋಜನೆಗೆ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಮಂಜೂರು ಮಾಡಿದ್ದಾರೆ. ಐದು ವರ್ಷಗಳ ಕಾಲ ಲೋಕಸಭಾ ಸದಸ್ಯರಾಗಿದ್ದ ಬಿ.ಎನ್.ಚಂದ್ರಪ್ಪ ಹೈವೇ ಹಾಗೂ ನೀರಾವರಿ ಮಂತ್ರಿಗಳ ಪಕ್ಕದಲ್ಲಿ ಕುಳಿತುಕೊಳ್ಳಲು ಆಗದೆ ಐದು ವರ್ಷಗಳ ಕಾಲ ವಿನಾ ಕಾಲಹರಣ ಮಾಡಿದರು. ಹಾಗಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಟ್ಟರೆ ಮುಧೋಳ, ಬಾಗಲಕೋಟೆಯಲ್ಲಿ ಯಾವ ರೀತಿ ಅಭಿವೃದ್ಧಿಪಡಿಸಿದ್ದೇನೋ ಚಿತ್ರದುರ್ಗ ಜಿಲ್ಲೆಯನ್ನು ಅದೇ ರೀತಿ ಅಭಿವೃದ್ಧಿಯತ್ತ ಕೊಂಡೊಯ್ಯುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದು ಭರವಸೆ ನೀಡಿದರು.

ಬಿ.ಎಸ್.ಯಡಿಯೂರಪ್ಪ ಹಾಗೂ ಬೊಮ್ಮಾಯಿರವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಸಮಾಜ ಕಲ್ಯಾಣ ಇಲಾಖೆ ಹಾಗೂ ನೀರಾವರಿ ಸಚಿವನಾಗಿ ಸಾಕಷ್ಟು ಕೆಲಸಗಳನ್ನು ಮಾಡಿದ್ದೇನೆ. ಬಿಜಾಪುರ ಜಿಲ್ಲೆ ಮುಧೋಳ ವಿಧಾನಸಭಾ ಕ್ಷೇತ್ರದಲ್ಲಿ ಸಾಕಷ್ಟು ವಸತಿ ಶಾಲೆ ಹಾಗೂ ಹಾಸ್ಟೆಲ್‌ಗಳನ್ನು ತೆರೆದು ಬಡ ಮಕ್ಕಳ ಶಿಕ್ಷಣಕ್ಕೆ ಅವಕಾಶ ಕಲ್ಪಿಸಿದ್ದೇನೆ. ಮೂರನೆ ಬಾರಿಗೆ ನರೇಂದ್ರಮೋದಿ ದೇಶದ ಪ್ರಧಾನಿಯಾಗಬೇಕಾಗಿರುವುದರಿಂದ ಕಾರ್ಯಕರ್ತರು ಪ್ರತಿ ಬೂತ್‌ಗಳಲ್ಲಿ ಮನೆ ಮನೆಗೆ ಭೇಟಿ ನೀಡಿ ನಮ್ಮ ಸರ್ಕಾರದ ಸಾಧನೆಗಳನ್ನು ಜನತೆಗೆ ತಿಳಿಸಿ ಹೆಚ್ಚಿನ ಬಹುಮತಗಳಿಂದ ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ವಿನಂತಿಸಿದರು.

ಕೇಂದ್ರ ಸರ್ಕಾರ ಅಪ್ಪರ್‌ಭದ್ರಾ ಯೋಜನೆಗೆ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಘೋಷಿಸಿದೆ. ಇನ್ನು ರಾಜ್ಯ ಸರ್ಕಾರದ ಪಾಲೇನು ಎಂದು ಪ್ರಶ್ನಿಸಿದ ಗೋವಿಂದ ಕಾರಜೋಳರವರು ಎಲ್ಲದಕ್ಕೂ ಕೇಂದ್ರದ ಮೇಲೆ ಆಪಾದನೆ ಹೊರಿಸುವುದು ಸರಿಯಲ್ಲ. ಕೇಂದ್ರ ಮಂತ್ರಿಯಾಗಿದ್ದ ಎ.ನಾರಾಯಣಸ್ವಾಮಿ ಕೇಂದ್ರೀಯ ವಿದ್ಯಾಲಯಕ್ಕೆ ಒತ್ತು ನೀಡಿದ್ದು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿದರೆ ಇನ್ನು ಹೆಚ್ಚಿನ ಅಭಿವೃದ್ಧಿ ಕೈಗೊಳ್ಳುವುದರ ಜೊತೆಗೆ ಚಿತ್ರದುರ್ಗದಲ್ಲಿ ವಿಮಾನ ನಿಲ್ದಾಣಕ್ಕೆ ಮೊದಲ ಆದ್ಯತೆ ನೀಡುತ್ತೇನೆ. ಇದರಿಂದ ವ್ಯಾಪಾರ, ವಹಿವಾಟು, ಪ್ರವಾಸೋದ್ಯಮ, ವಾಣಿಜ್ಯ ಚಟುವಟಿಕೆಗಳು ಗರಿಗೆದರಲಿದೆ ಎಂದರು.

ಕೀ ಓಟರ್ಸ್‌ಗಳು ನಿಮ್ಮ ನಿಮ್ಮ ಬೂತ್‌ಗಳಲ್ಲಿ ಮುನ್ನೂರಕ್ಕೂ ಹೆಚ್ಚು ಮತ ಹಾಕಿಸುವ ಶಕ್ತಿಯಿದೆ. ಸಮಯ ಕಡಿಮೆಯಿರುವುದರಿಂದ ಕ್ಷೇತ್ರದ ಎಲ್ಲಾ ಕಡೆ ಸುತ್ತಾಡುವುದು ಕಷ್ಟ. ಅದಕ್ಕಾಗಿ ನೀವುಗಳೇ ಅಭ್ಯರ್ಥಿ, ಪ್ರಧಾನಿಯಾಗಿ ಕೇಂದ್ರ ಸರ್ಕಾರದ ಯೋಜನೆಗಳ ಕರಪತ್ರಗಳನ್ನು ಹಂಚಿ ನನ್ನ ಗೆಲುವಿಗೆ ಕೈಜೋಡಿಸಿ ಎಂದು ವಿನಂತಿಸಿದರು.

ಕಾಂಗ್ರೆಸ್‌ನವರು ಐದು ಬಿಟ್ಟಿ ಗ್ಯಾರೆಂಟಿಗಳ ಆಸೆ ಹುಟ್ಟಿಸಿ ಮತದಾರರ ಮನವೊಲಿಸುವ ಕೆಲಸ ಮಾಡುತ್ತಿದ್ದಾರೆ. ಲೋಕಸಭಾ ಚುನಾವಣೆಯನಂತರ ಉಚಿತ ಗ್ಯಾರೆಂಟಿಗಳು ಮೂಲೆ ಗುಂಪಾಗುವುದು ಗ್ಯಾರೆಂಟಿ. ಅದಕ್ಕಾಗಿ ಕೀ ಓಟರ್ಸ್‌ಗಳು ಚುನಾವಣೆ ಮುಗಿಯುವತನಕ ನಿಮ್ಮ ನಿಮ್ಮ ಬೂತ್‌ಗಳಲ್ಲಿದ್ದುಕೊಂಡು ಕೆಲಸ ಮಾಡಿದರೆ ನನ್ನ ಗೆಲುವು ನಿಶ್ಚಿತ ಎಂದು ಹೇಳಿದರು. ನ್ಯಾಯವಾದಿ ಸುರೇಶ್, ಇಂಜಿನಿಯರ್ ಎಂ.ಕೆ.ರವೀಂದ್ರ, ಐಶ್ವರ್ಯ ಫೋರ್ಟ್‌ನ ಅರುಣ್‌ಕುಮಾರ್, ಕ್ರೀಡಾ ತರಬೇತುದಾರ ಸಾಧಿಕ್, ಅಶೋಕ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಲಕ್ಷ್ಮಣಪ್ಪ, ಬಿಜೆಪಿ. ಜಿಲ್ಲಾ ವಕ್ತಾರ ನಾಗರಾಜ್‌ಬೇದ್ರೆ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಿಷ್ಣು, ನಾಗೇಂದ್ರ, ರಾಮಚಂದ್ರ, ರಾಜಶೇಖರ್ ಈ ಸಂದರ್ಭದಲ್ಲಿದ್ದರು.

# ಇಂದು ಲಕ್ಷ್ಮೀಕೊಲ್ಲಾಪುರದಮ್ಮ ರಥೋತ್ಸವ




» ಪರಶುರಾಂಪುರ

ಗ್ರಾಮದ ಆರಾಧ್ಯ ದೇವತೆ ಶ್ರೀ ಲಕ್ಷ್ಮೀಕೊಲ್ಲಾಪುರದಮ್ಮ ದೇವಿಯ ಉತ್ಸವದ ಅಂಗವಾಗಿ ಗುರುವಾರ ಶ್ರದ್ಧಾ ಭಕ್ತಿಯಿಂದಾ ದೇವಿಯ ಮೂರ್ತಿಗಳ ಜತೆಯಲ್ಲಿ ಸಮೀಪದ ವೇದಾವತಿ ನದಿಯಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಗಂಗಾಪೂಜೆ ನೆರವೇರಿಸಲಾಯಿತು.

ಗಂಗಾಪೂಜೆಯ ಬಳಿಕ ವಿವಿಧ ಜಾತಿಯ ಹೂವುಗಳು ಮತ್ತು ಒಡವೆ ವಸ್ತ್ರಗಳಿಂದ ದೇವರನ್ನ ಮೂರ್ತಿಯನ್ನು ಅಲಂಕರಿಸಿ ಜನಪದ ವಾದ್ಯಗಳೊಂದಿಗೆ ಸಂಜೆ ಗ್ರಾಮದ ಜಂಬಿ ಮರದ ಬಳಿ ದೇವಿಯ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ ಗ್ರಾಮದ ಹನ್ನೆರೆಡು ಕೈವಾಡಸ್ತರು, ಮತ್ತು ಭಕ್ತರು ಹರಕೆಯ ರೂಪದಲ್ಲಿ ದೇವಿಗೆ ಹೊಸ ವಸ್ತ್ರ, ಹಸಿರು ಬಳೆ, ಹರಿಷಣ ಕುಂಕುಮ ನೀಡಿ ತಮ್ಮ ಭಕ್ತಿ ಸಮರ್ಪಿಸಿದರು. ಕಲಾತಂಡಗಳೊಂದಿಗೆ ಮೆರವಣಿಗೆಯ ಮೂಲಕ ಕಾಳಮ್ಮನ ದೇಗುಲದ ಬಳಿ ಮಣೇವು ಪೂಜೆ ಸಲ್ಲಿಸಿ ನಂತರ ಈಡಿಗ ಸಮುದಾಯದವರು ದೇವಿಗೆ ಹೆಂಡದ ಸೇವೆ ಬಳಿಕ ಊರ ಬಾಗಿಲ ಸಮೀಪದ ಚಳಿಜ್ವರದಮ್ಮ ದೇವಸ್ಥಾನದ ಕಟ್ಟೆಯ ಮೇಲೆ ಪ್ರತಿಷ್ಠಾಪಿಸಿ ಪೂಜೆ ಮಾಡಲಾಯಿತು.

ಗ್ರಾಮ ದೇವಿಯ ಉತ್ಸವದ ಅಂಗವಾಗಿ ಗುಗ್ಗರಿ ಬಂಡಿಯ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದ ಎಲ್ಲರಿಗೂ ಗ್ರಾಮದ ರೈತರು ವಿವಿಧ ತೆಂಗಿನ ಹಸಿಗರಿ,ಹೊಂಗೆ ಸೊಪ್ಪು,ಬಾಳೆ,ಹಸಿರು ತೋರಣಗಳಿಂದ ಜತೆಯಲ್ಲಿ ಗುಗ್ಗರಿ ಬಂಡಿಗಳಲ್ಲಿ ಬೇಯಿಸಿ ದ್ವಿದಳ ಧಾನ್ಯಗಳು ಹಾಗೂ ಪಾನಕವನ್ನು ಭಕ್ತರಿಗೆ ನೀಡಲಾಯಿತು.

ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು, ಗ್ರಾಮದ ಹನ್ನೆರೆಡು ಕೈವಾಡಸ್ತರು,ಸ್ಥಳೀಯ ಜನಪ್ರತಿನಿಧಿಗಳು ಮತ್ತು ಭಕ್ತರು ಗ್ರಾಮಸ್ಥರು ಇದ್ದರು.

# ಚಳ್ಳಕೆರೆ: 18 ಪ್ರಕರಣ, 1.07 ಲಕ್ಷ ಹಣ ವಶ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಪೊಲೀಸ್ ಇಲಾಖೆ ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಚಳ್ಳಕೆರೆ ನಗರವೂ ಸೇರಿದಂತೆ ವಿವಿಧ ಕಡೆ ನಡೆಯುವ ಇಸ್ಪೀಟ್ ಜೂಜಾಟ ಪ್ರಕರಣ ನಿಯಂತ್ರಿಸಲು ಜಿಲ್ಲಾ ರಕ್ಷಣಾಧಿಕಾರಿ, ಹೆಚ್ಚುವರಿ ರಕ್ಷಣಾಧಿಕಾರಿ ಮಾರ್ಗದರ್ಶನದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಂಡು ವಿವಿಧೆಡೆ ಜೂಜಾಟದ ಅಡ್ಡೆಗಳ ಮೇಲೆ ದಾಳಿ ನಡೆಸಿ ಜೂಜುಕೋರರು ಹಾಗೂ ಜೂಜಾಟದ ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ತಿಳಿಸಿದ್ದಾರೆ.ಅವರು, ಪತ್ರಿಕೆಯೊಂದಿಗೆ ಮಾತನಾಡಿ, ಕ್ರೋಧಿನಾಮ ಸಂವತ್ಸರದ ಯುಗಾದಿ ಹಬ್ಬ ಏ.8ರಿಂದ10ರ ತನಕ ನಡೆಯಲಿದ್ದು, ಏ.8 ಮತ್ತು 9ರ ಎರಡು ದಿನಗಳ ಕಾಲ ಚಳ್ಳಕೆರೆ ಠಾಣಾ ವ್ಯಾಪ್ತಿಯಲ್ಲಿ ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್ ನೇತೃತ್ವದಲ್ಲಿ ಪಿಎಸ್‌ಐಗಳಾದ ಕೆ.ಸತೀಶ್‌ನಾಯ್ಕ, ಜೆ.ಶಿವರಾಜ್, ಧರೆಪ್ಪಬಾಳಪ್ಪದೊಡ್ಡಮನಿ ಮತ್ತು ತಂಡ ವಿವಿದೆಡೆಗಳಲ್ಲಿ ಮಿಂಚಿನ ದಾಳಿ ನಡೆಸಿ ಜೂಜುರುಕೋರರು ಮತ್ತು ಹಣವನ್ನು ವಶಪಡಿಸಿಕೊಂಡಿದ್ದಾರೆ.

ಏ.8ರ ಸೋಮವಾರ ಸೋಮಗುದ್ದು, ಜನತಾಕಾಲೋನಿ, ಗೋಪನಹಳ್ಳಿ, ಭರಮಸಾಗರ, ನಾರಾಯಣಪುರ, ಕಲಮರಹಳ್ಳಿ ಗ್ರಾಮಗಳಲ್ಲಿ ದಾಳಿ ನಡೆಸಿ ಒಟ್ಟು 6 ಪ್ರಕರಣಗಳಲ್ಲಿ 35 ಜನರನ್ನು ವಶಕ್ಕೆ ಪಡೆದು ಅವರಿಂದ ಜೂಜಾಟದ ರೂ 56890 ಹಣ ವಶಪಡಿಸಿಕೊಳ್ಳಲಾಗಿದೆ. ಏ.9ರ ಮಂಗಳವಾರ ಚಿತ್ರಯ್ಯನಹಟ್ಟಿ, ಅಂಬೇಡ್ಕರ್‌ನಗರ, ಗಾಂಧಿನಗರ, ನನ್ನಿವಾಳ ಹೆಗ್ಗೆರೆ, ವೀರದಿಮ್ಮನಹಳ್ಳಿ, ಬೊಮ್ಮಸಮುದ್ರ, ಮದಕರಿನಗರ ಸೇರಿದಂತೆ ಒಟ್ಟು 12 ಪ್ರಕರಣ ದಾಖಲಿಸಿ 56 ಮಂದಿ ವಶಕ್ಕೆ ಪಡೆದು 50160 ಹಣವನ್ನು ವಶಪಡಿಸಿಕೊಳ್ಳಲಾಗಿದೆ.

ಎರಡು ದಿನಗಳ ಕಾಲ ಪೊಲೀಸ್ ಇಲಾಖೆ ನಿರಂತರ ಕಾರ್ಯಚರಣೆಯಿಂದ ಪಟ್ಟು 18 ಪ್ರಕರಣ ದಾಖಲಿಸಿ, 91 ಜನರನ್ನು ವಶಕ್ಕೆ ಪಡೆದು 100750ಹಣವನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ.

ಸಾರ್ವಜನಿಕರು ತಮ್ಮ ವ್ಯಾಪ್ತಿಯಲ್ಲಿ ಎಲ್ಲೇ ಇಸ್ಪೀಟ್‌ಜೂಜಾಟ ನಡೆದಲ್ಲಿ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ.

## ಹೆಗ್ಗೆರೆ ಗೇಟ್‌ಬಳಿ ಬೈಕ್‌ಗೆ ಕಾರು ಡಿಕ್ಕಿ: ಬೈಕ್ ಸವಾರ ಸಾವು




» ಚಳ್ಳಕೆರೆ

ರಾಷ್ಟ್ರೀಯ ಹೆದ್ದಾರಿ 150(ಎ) ಹೆಗ್ಗೆರೆ ಗೇಟ್‌ಬಳಿ ಮೋಟಾರ್ ಬೈಕ್‌ಗೆ ಕಾರು ಹಿಂಬದಿಯಿಂದ ಡಿಕ್ಕಿಯಾದ ಪರಿಣಾಮ ಬೈಕ್ ಸವಾರ ಕೋನಿಗರಹಳ್ಳಿಯ ಆರ್.ಮಹಂತೇಶ್(60) ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಮೃತ ಆರ್.ಮಹಂತೇಶ್ ತನ್ನ ಬೈಕ್‌ನಲ್ಲಿ ಕಾಪರನಹಳ್ಳಿ ಕಡೆಯಿಂದ ಹೆಗ್ಗೆರೆ ಗೇಟ್‌ಗೆ ಬಂದು ಹೆಗ್ಗೆರೆ ಗೇಟ್ ಮೂಲಕ ಚಳ್ಳಕೆರೆ ಕಡೆಗೆ ಬರುವ ಸಂದರ್ಭದಲ್ಲಿ ಹಿರಿಯೂರು ಪಡೆಯಿಂದ ಚಳ್ಳಕೆರೆಗೆ ಬರುತ್ತಿದ್ದ ಕಾರು ವೇಗವಾಗಿ ಬಂದು ಬೈಕ್‌ನ ಹಿಂಭಾಗಕ್ಕೆ ಡಿಕ್ಕಿಪಡಿಸಿದ ಪರಿಣಾಮ ಬೈಕ್ ಚಾಲಕ ಆರ್.ಮಹಂತೇಶ್‌ಗೆ ತಲೆ, ಕುತ್ತಿಗೆಗೆ ಪೆಟ್ಟುಬಿದ್ದು ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಮೃತನ ಪುತ್ರ ಎಂ.ಗಿರಿಗೌಡ ಅಪಘಾತಪಡಿಸಿದ ಕಾರುಚಾಲಕ ತಾಡಪತ್ರಿಯ ಜಿ.ಸುನೀಲ್‌ಕುಮಾರ್ ವಿರುದ್ಧ ದೂರುನೀಡಿದ್ದು, ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿದ್ದಾರೆ.

## ಪ್ರಮುಖ ಸುದ್ದಿ

### ಗೋಮಾಳ ಕೆರೆಕಟ್ಟೆ, ಗುಡ್ಡಗಳಿಂದ ಆಕ್ರಮ ಮಣ್ಣು ಸಾಗಣೆ; ಪರಿಸರಕ್ಕೆ ಕುತ್ತು, ಜೀವನಕ್ಕೆ ಆಪತ್ತು

# ಹೊಳಲ್ಕೆರೆ ಗ್ರಾಮೀಣ ಪ್ರದೇಶದಲ್ಲಿ ಆಕ್ರಮ ಮಣ್ಣು ದಂಧೆ

» ಎಸ್.ವೇದಮೂರ್ತಿ



> ಗೋಮಾಳಗಳು, ಗುಡ್ಡಗಳು, ಅರಣ್ಯ ಪ್ರದೇಶಗಳು, ಮಣ್ಣು ಮಾಫಿಯಾಗಳ ಕೈಗೆ ಸಿಕ್ಕಿ ನಾಶವಾಗುತ್ತದೆ. ಇದರಿಂದ ಪರಿಸರ ಹಾಳಾಗುತ್ತಿದೆ. ಪರಿಸರ ಸಂರಕ್ಷಣೆಗೆ ಒತ್ತು ನೀಡಬೇಕು. ಅಭಿವೃದ್ಧಿ ಹೆಸರಲ್ಲಿ ಪ್ರಕೃತಿ ನಾಶವಾಗುವುದು ಸರಿಯಲ್ಲ. ಪ್ರಕೃತಿ ವಿಕೋಪದ ಪರಿಣಾಮ ನಾವೆಲ್ಲ ಅನುಭವಿಸುತ್ತಿದ್ದೇವೆ.
>
> » ಬಿ.ಜಿ.ಗಿರೀಶ್ ಸಮಾಜ ಚಿಂತಕರು.

**ವಿಶೇಷ ವರದಿ**

ಹೊಳಲ್ಕೆರೆ: ತಾಲೂಕಿನ ಗ್ರಾಮೀಣ ಪ್ರದೇಶದ ಸರಕಾರಿ ಗೋಮಾಳ, ಅರಣ್ಯ ಪ್ರದೇಶ, ಬೆಟ್ಟಗಳು ಹಾಗೂ ಕೆರೆಕಟ್ಟೆಗಳಲ್ಲಿ ಆಕ್ರಮವಾಗಿ ಮಣ್ಣು ಬಗೆದು ಸಾಗಣೆ ಮಾಡುವದಂಧೆಎಗ್ಗಿಲ್ಲದೆನಡೆಯುತ್ತಿದ್ದರೂ ತಾಲೂಕು ಆಡಳಿತ ಕಂಡೂ ಕಾಣದಂತೆ ಕಣ್ಣು ಮುಚ್ಚಿ ಕುಳಿತಿರುವುದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ.

ತಾಲೂಕಿನ ರಾಮಗಿರಿ ಕಾವಲ್, ತಾಳಿಕಟ್ಟೆ ಕಾವಲ್, ಗುಂಡೇರಿ ಕಾವಲ್, ಅಮೃತ್ ಮಹಲ್ ಕಾವಲ್, ಗರಗ ಕಾವಲ್ ಸೇರಿ ಕಸಬಾ, ತಾಳ್ಯ, ಹೆಚ್.ಡಿ.ಪುರ, ಬಿದುರ್ಗ ಹೋಬಳಿ ವ್ಯಾಪ್ತಿಯಲ್ಲಿರುವ ಬಹುತೇಕ ಕೆರೆ, ಅರಣ್ಯ ಪ್ರದೇಶ, ಬೆಟ್ಟಗುಡ್ಡ, ಗೋಮಾಳ ಪ್ರದೇಶದಲ್ಲಿ ಮಣ್ಣು ದಂಧೆಕೋರರು ಆಕ್ರಮವಾಗಿ ಮಣ್ಣು ಬಗೆದು ಭಾರಿ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ಇದರಿಂದಾಗಿ ಗೋಮಾಳ, ಕೆರೆ ಕಟ್ಟೆಗಳಲ್ಲಿ ಹತ್ತಾರು ಅಡಿಗಳಷ್ಟು ಗುಂಡಿ ಬಿದ್ದು ಕೆರೆ ನೈಸರ್ಗಿಕ ಸೊಗಡು ಕಳೆದುಕೊಳ್ಳುತ್ತಿವೆ. ಕೆರೆಗಳಲ್ಲಿ ಅಂತರ್ಜಲ ನಿಲ್ಲದೆ ನೀರು ಇಂಗಿ ಬರದ ಬವಣೆಗೆ ಆಹ್ವಾನವಿಟ್ಟತಾಗಿದೆ. ಬೆಟ್ಟಗಳು ಬೋಲಾಗಿ ಗೀಡಮರಗಳಿಲ್ಲದೆ ವನ್ಯ ಮೃಗದ ಬದುಕಿ ಸಂಚಕಾರ ತಂದೊಡ್ಡಿದೆ. ಅಕ್ರಮ ದಂಧೆಗೆ ಕಡಿವಾಣ ಹಾಕಬೇಕಿದ್ದ ಕಂದಾಯ ಇಲಾಖೆ ಶಿರೆಸ್ಥೇದಾರ್, ಆರ್‌ಐಗಳು ದಂಧೆಯಲ್ಲಿ ಶಾಮಿಲಾಗಿರುವ ಶಂಕಿ ಹಳ್ಳಿಗಳಲ್ಲಿ ಜನಾಭಿಪ್ರಾಯ ವ್ಯಕ್ತವಾಗಿದೆ. ಎಗ್ಗಿಲ್ಲದೆ ನಡೆಯುತ್ತಿದ್ದರೂ ಆಧಿಕಾರಿಗಳ ಮೌನಕ್ಕೆ ಜಿಲ್ಲಾಧಿಕಾರಿಗಳೂ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ನಾಗರಿಕರ ಆಗ್ರಹ.

**ಟಿಪ್ಪರ್ ಲಾರಿ ಹಾವಳಿ :** ಗ್ರಾಮೀಣ ರಸ್ತೆಗಳಲ್ಲಿ ದೊಡ್ಡದೊಟ್ಟ ಟಿಪ್ಪರ್ ಲಾರಿಗಳಲ್ಲಿ ಮಣ್ಣು ಸಾಗಣೆ ಹಿನ್ನಲೆಯಲ್ಲಿ ರಸ್ತೆಗಳು ಗುಂಡಿ ಬಿದ್ದು ಹಾಳಾಗಿವೆ. ರಸ್ತೆಯ ಪಕ್ಕದ ತೋಟಗಳು ಧೂಳಿನಿಂದ ಬೆಳೆಗಳಿಗೆ ರೋಗರುಜಿಗಳು ಕಾಣಿಸಿಕೊಂಡಿವೆ. ಮಣ್ಣು ದಂಧೆಕೂರರು ಬಲಾಢ್ಯರಾಗಿದ್ದು, ರಾಜಕೀಯ ಹಿನ್ನಲೆಯೂಳವರು. ಅಧಿಕಾರಿಗಳು ಇವರ ಜತೆ ಕೈಜೋಡಿಸಿದ್ದು, ಮಣ್ಣು ಮಾಫೀಯವನ್ನು ತಡೆದು ನಿಲ್ಲಿಸಲು ತಾಲೂಕು ಆಢಳಿತ ದುರ್ಬಲ ಎನ್ನುವಂತಾಗಿದೆ.

**ಕೆರೆ ಮೂಲಕ್ಕೆ ಧಕ್ಕೆ :** ಕೆರೆಯಲ್ಲಿರುವ ಮೆಕ್ಕಲು ಮಣ್ಣು ರೈತರು ತೋಟಗಳಿಗೆ ಕೆರೆ ಮೇಲಿನ ಪದರು ತೆಗೆದರೇ, ಮಣ್ಣು ದಂಧೆಕೋರರು ಕೆರೆ ಒಡಲನ್ನು ಅಗೆದು ತೆಗೆದು ಮಾರಾಟ ಮಾಡುತ್ತಿದ್ದಾರೆ. ರೈತರ ಹೆಸರಿನಲ್ಲಿ ಭೂ ಪರಿವರ್ತನೆ ನಿವೇಶನಗಳಲ್ಲಿ ರಸ್ತೆ, ಚರಂಡಿ ನಿರ್ಮಾಣಕ್ಕೆ ಕೆರೆ ಪಾತಾಳ ಬಗೆಯುತ್ತಿದ್ದಾರೆ. ಗ್ರಾಮದಲ್ಲಿರುವ ಬುದ್ದಿವಂತರೂ ದೂರು ನೀಡಿದರೂ ಕಂದಾಯ ಇಲಾಖೆ ನೌಕರರು ಕಣ್ಣು ಮುಚ್ಚಿಕೊಂಡು ದಂಧೆಕೋರರ ಕೈಗೋಬೆಯಂತಾಗಿದ್ದಾರೆ.

**ಕೋಟ್ಯಾಂತರ ಸೇಸು ನಷ್ಟ :** ಮಣ್ಣು ದಂಧೆಕೂರರಿಂದ ಸರಕಾರಕ್ಕೆ ಕೋಟ್ಯಾಂತರ ಸೇಸು ನಷ್ಟವಾಗುತ್ತಿದೆ. ರಸ್ತೆ, ಕಟ್ಟಡ ಮತ್ತೀತರ ಯೋಜನೆಗಳ ಹೆಸರಲ್ಲಿ ಮಣ್ಣು ಬಗೆಯಲಾಗಿದೆ. ಅದರೇ ಕಂದಾಯ ಇಲಾಖೆ ತೆರಿಗೆ ಸಂಗ್ರಹ ಕೈಬಿಟ್ಟಿದೆ. ಬಿಟ್ಟಿಯಾಗಿ ಮಣ್ಣು ಸಗಾಣಿಕೆಯಿಂದ ಮಣ್ಣುಚೋರರಿಗೆ ಪ್ರೋತ್ಸಾಹ ಸಿಕ್ಕತಾಗಿದೆ. ಇದು ಸರಕಾರದ ಖಜಾನೆಗೆ ನಷ್ಟವನ್ನೂಂಟು ಮಾಡಿದೆ.

**ಭೂ ಪರಿವರ್ತನೆಗೆ :** ಪಟ್ಟಣದ ಹಾಗೂ ಹೋಬಳಿ ಮಟ್ಟದಲ್ಲಿ ಜಮೀನುಗಳನ್ನು ಭೂ ಪರಿವರ್ತನೆ ಮಾಡಿ ನಿವೇಶನವನ್ನಾಗಿ ಮಾಡುತ್ತಿರುವ ರಿಯಲ್ಲೇಟ್ ಉದ್ಯಮಿಗಳು ನಿವೇಶ ನಿರ್ಮಾಣಕ್ಕೆ ಬೇಕಾದ ಸಾವಿರಾರು ಲೋಟ್ ಮಣ್ಣುಗಳನ್ನು ಗೋಮಾಳ, ಗುಡ್ಡ, ಕೆರೆ, ಕಟ್ಟೆ, ಅರಣ್ಯ ಪ್ರದೇಶದಲ್ಲಿ ಆಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದಾರೆ. ಇದಕ್ಕೆ ಸರಕಾರ ಏಕೆ ನಿಯಂತ್ರಣ ಹಾಕುತ್ತಿಲ್ಲ ಎನ್ನುವ ಆನುದಾನ ಬಂದಿದ್ದು, ಕಂದಾಯ, ಅರಣ್ಯಾ ಇಲಾಖೆ ಮಣ್ಣು ಚೂರರ ಜತೆ ಶಾಮಿಲಾಗಿರುವ ಶಂಕೆ ಸಾರ್ವಜನಿಕರಿಂದ ವ್ಯಕ್ತವಾಗಿದೆ.

## ಫಾಸ್ಟ್ ನ್ಯೂಸ್

### ಏ.13 ರಿಂದ 16 ರವರೆಗೆ ಮನೆಯಿಂದ ಮತದಾನಕ್ಕೆ ಅವಕಾಶ

**ಚಿತ್ರದುರ್ಗ:** ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಏ. 13 ರಿಂದ 16 ರವರೆಗೆ 85 ವರ್ಷಕ್ಕಿಂತ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನ ಮತದಾರರು ಮನೆಯಿಂದ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ 85 ವರ್ಷ ಮೇಲ್ಪಟ್ಟ ಮತದಾರರು ಹಾಗೂ ವಿಶೇಷಚೇತನ ಮತದಾರರು ತಮ್ಮ ಮನೆಯಲ್ಲಿಯೇ ಮತದಾನ ಮಾಡಲು ಅರ್ಜಿ ಸಲ್ಲಿಸಿರುವ ಮತದಾರರಿಗೆ ಅನುಕೂಲವಾಗುವಂತೆ ಮನೆ ಮತದಾನ ಕಾರ್ಯವು ಚಿತ್ರದುರ್ಗ, ಮೊಳಕಾಲ್ಮೂರು, ಸಿರಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದೇ ಏಪ್ರಿಲ್ 13 ರಿಂದ 15ರ ವರೆಗೆ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದೇ ಏಪ್ರಿಲ್ 13 ರಿಂದ 14ರ ವರೆಗೆ, ಚಳ್ಳಕೆರೆ ಹಾಗೂ ಪಾವಗಡ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಏಪ್ರಿಲ್ 13 ರಿಂದ 16ರ ವರೆಗೆ, ಪ್ರತಿದಿನ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಮನೆಯಿಂದ ಮತದಾನ ಕಾರ್ಯ ನಡೆಯಲಿದೆ. ಈಗಾಗಲೇ ವಿಧಾನಸಭಾ ಕ್ಷೇತ್ರವಾರು ಸಹಾಯಕ ಚುನಾವಣಾಧಿಕಾರಿಗಳು 85 ವರ್ಷ ಮೇಲ್ಪಟ್ಟವರಿಗೆ ಹಾಗೂ ವಿಶೇಷಚೇತನರಿಗೆ ಫಾರಂ 12 "ಡಿ" ವಿತರಿಸಿ ಮನೆಯಿಂದ ಮತದಾನ ಮಾಡುವವರ ಪಟ್ಟಿಯನ್ನು ಸಿದ್ಧಪಡಿಸಿದ್ದಾರೆ. ಇದನ್ನು ಆಧರಿಸಿ ಮನೆಯಿಂದ ಮತದಾನ ಮಾಡುವುದಕ್ಕೆ ರೂಟ್ ಮ್ಯಾಪ್ ತಯಾರಿಸಲಾಗಿದೆ. ಇದರ ಅನ್ವಯ ಮನೆಯಿಂದ ಮತದಾನ ಕಾರ್ಯ ನಡೆಯಲಿದೆ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಂಬೇಡ್ಕರ್ ಜಯಂತಿ

**ಚಿತ್ರದುರ್ಗ:** ಲೋಕಸಭಾ ಸಾರ್ವತ್ರಿಕ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿ ಹಿನ್ನಲೆಯಲ್ಲಿ ಇದೇ ಏಪ್ರಿಲ್ 14ರಂದು ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜನ್ಮ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಗುವುದು. ಏಪ್ರಿಲ್ 14ರಂದು ಬೆಳಿಗ್ಗೆ 9.30 ಗಂಟೆಗೆ ಚಿತ್ರದುರ್ಗ ನಗರದ ಅಬೇಂಡ್ಕರ್ ವೃತ್ತದಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಓ ಎಸ್. ಜೆ.ಸೋಮಶೇಖರ್ ಮಾಲಾರ್ಪಣೆ ಮಾಡುವರು. ನಂತರ ಬೆಳಿಗ್ಗೆ 10 ಗಂಟೆಗೆ ನಗರದ ಜಿ.ಪಂ ಸಭಾಂಗಣದಲ್ಲಿ ಸರಳವಾಗಿ ಜರುಗಲಿದೆ.

# ಚುನಾವಣೆ ಮುಗಿದ ಗ್ಯಾರೆಂಟಿ ಮೂಲೆಗುಂಪು

» **ಚಿತ್ರದುರ್ಗ**

ಲೋಕಸಭೆ ಚುನಾವಣೆ ಮುಗಿದ ಮೇಲೆ ಕಾಂಗ್ರೆಸ್‌ನ ಐದು ಗ್ಯಾರೆಂಟಿಗಳು ಮೂಲೆ ಗುಂಪಾಗುತ್ತವೆ. ಪ್ರತಿ ಕಾಲೋನಿ ಹಟ್ಟಿಗಳಲ್ಲಿ ಹೋಗಿ ಮತ ಕೇಳುವ ಮೂಲಕ ನನ್ನನ್ನು ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಮಾದಿಗ ಜನಾಂಗದವರಲ್ಲಿ ಮನವಿ ಮಾಡಿದರು.

ಮಾದಿಗ ಮಹಾಸಭಾ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗಾರವರ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಾದಿಗ ಜನಾಂಗದವರೊಂದಿಗೆ ಮಾತನಾಡಿದ ಗೋವಿಂದ ಕಾರಜೋಳ ಕಾಂಗ್ರೆಸ್ ಪಕ್ಷ ನಮ್ಮವರಿಗೆ ಸ್ಥಾನ ಕೊಟ್ಟಿಲ್ಲ. ರಾಮಕೃಷ್ಣ ಹೆಗಡೆ ನನ್ನನ್ನು ರಾಜಕೀಯಕ್ಕೆ ತಂದವರು. ನಮ್ಮ ಸಮಾಜವನ್ನು ಗುರುತಿಸಿದವರು ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ನಿಜಲಿಂಗಪ್ಪನವರು ಎಂದು ಸ್ಮರಿಸಿಕೊಂಡರು.



ಮುಂದೆ ಚುನಾವಣೆಗೆ ನಿಲ್ಲಲ್ಲ. ಆದರೂ ಸಕ್ರಿಯವಾಗಿ ರಾಜಕಾರಣದಲ್ಲಿರುತ್ತೇನೆ. ಮಾದಿಗ ಸಮಾಜವನ್ನು ಉಳಿಸಿಕೊಳ್ಳಬೇಕಾಗಿರುವುದರಿಂದ ಈ ಬಾರಿಯ ಲೋಕಸಭಾ ಚುನಾವಣೆಗೆ ಮಹತ್ವವಿದೆ. ಯಾವುದೆ ಕಾರಣಕ್ಕೂ ಮತದಾನದಿಂದ ಹಿಂದೆ ಸರಿಯಬೇಡಿ. ಮಾದಿಗ ಜನಾಂಗದಲ್ಲಿ ಪ್ರಜ್ಞೆ ಬೆಳೆಯಬೇಕಾದರೆ ಒಗ್ಗಟ್ಟಾಗಿರಬೇಕು. ನನ್ನ ಗೆಲುವು ನಿಮ್ಮ ಕೈಯಲ್ಲಿದೆ. ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಬೇಕು. ಯಾರಿಂದಲೂ ತಪ್ಪಿಸಲು ಆಗುವುದಿಲ್ಲ. ಈ ನಿಟ್ಟಿನಲ್ಲಿ ಮಾದಿಗ ಜನಾಂಗ ಒಂದಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕೆಂದು ಹೇಳಿದರು. ಪರಿಶಿಷ್ಟಜಾತಿ ಪರಿಶಿಷ್ಟವರ್ಗಕ್ಕೆ ಸೇರಿದ 25 ಸಾವಿರ ಕೋಟಿ ರೂ.ಗಳನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅನ್ಯ ಉದ್ದೇಶಕ್ಕೆ ಬಳಸಿಕೊಂಡಿದ್ದಾರೆ. ಮುದೋಳ ಬಾಗಲಕೋಟೆಯನ್ನು ಅಭಿವೃದ್ದಿಪಡಿಸಿರುವ ರೀತಿಯಲ್ಲಿ ಚಿತ್ರದುರ್ಗ ಜಿಲ್ಲೆಯನ್ನು ಅಭಿವೃದ್ದಿಪಡಿಸ ಬೇಕೆಂಬ ಉದ್ದೇಶವಿಟ್ಟುಕೊಂಡು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದೇನೆ. ಬಡ, ಅನಾಥ ಮಕ್ಕಳು ಹಾಗೂ ದೇವದಾಸಿಯರ ಮಕ್ಕಳ ಶಿಕ್ಷಣಕ್ಕಾಗಿ ವಸತಿ ಶಾಲೆ, ಹಾಸ್ಟೆಲ್‌ಗಳನ್ನು ನಿರ್ಮಿಸಿದ್ದೇನೆ. ಹತ್ತು ಸಾವಿರ ಮಕ್ಕಳು ವಿದ್ಯೆ ಕಲಿಯುತ್ತಿದ್ದಾರೆ. ಶಿಕ್ಷಣದಿಂದ ಮಾತ್ರ ಮಾದಿಗ ಜನಾಂಗದ ಬದಲಾವಣೆ ಕಂಡುಕೊಳ್ಳಬಹುದು ಎಂದರು.

ಮಾದಿಗ ಮಹಾಸಭಾ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗಾ ಮಾತನಾಡುತ್ತ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಗೆಲ್ಲಿಸಿಕೊಂಡು ಮಾದಿಗ ಜನಾಂಗದ ಶಕ್ತಿ ಏನೆಂಬುದನ್ನು ತೋರಿಸಬೇಕಾಗಿದೆ. ಎಲ್ಲರೂ ಒಟ್ಟಾಗಿ ಗೋವಿಂದ ಕಾರಜೋಳರನ್ನು ಗೆಲ್ಲಿಸಿಕೊಂಡರೆ ಕೇಂದ್ರದಲ್ಲಿ ಮಂತ್ರಿಯಾಗುವ ಸಾಧ್ಯತೆಗಳಿದೆ. ದೇಶದ ಪ್ರಧಾನಿಯಾಗಿದ್ದ ಅಟಲ್‌ಬಿಹಾರಿ ವಾಜಪೇಯಿ, ಹತ್ತು ವರ್ಷಗಳ ಕಾಲ ದೇಶವನ್ನು ಮುನ್ನಡೆಸಿದ ಪ್ರಧಾನಿ ನರೇಂದ್ರಮೋದಿರವರ ಜನಪರ ಯೋಜನೆಗಳನ್ನು ಪ್ರತಿ ಮನೆ ಮನೆಗೆ ಮುಟ್ಟಿಸಿ ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಗೋವಿಂದಕಾರಜೋಳರವರನ್ನು ಗೆಲ್ಲಿಸಿಕೊಳ್ಳೋಣ ಎಂದು ಮಾದಿಗ ಜನಾಂಗದವರಲ್ಲಿ ವಿನಂತಿಸಿದರು.

ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಮಾದಿಗ ಮಹಾಸಭಾದ ದೇವರಾಜ್ ಟಿ.ನಗರಂಗೆರೆ ಮಾತನಾಡಿ ನಾನು ಕೂಡ ನಾಮಪತ್ರ ಸಲ್ಲಿಸಿದ್ದೆ. ಆದರೆ ಅನೇಕರ ಅಭಿಪ್ರಾಯದಂತೆ ನಾಮಪತ್ರ ಹಿಂದಕ್ಕೆ ಪಡೆದು ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರಿಗೆ ಬೆಂಬಲಿಸುತ್ತಿದ್ದೇನೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ನಾಲ್ಕು ಲಕ್ಷ ಮಾದಿಗ ಜನಸಂಖ್ಯೆಯಿದ್ದು, ಬೇರೆ ಪಕ್ಷಗಳಿಗೆ ನಮ್ಮ ಓಟು ಚದುರದಂತೆ ನೋಡಿಕೊಂಡು ಗೋವಿಂದ ಕಾರಜೋಳರವರ ಗೆಲುವಿಗೆ ಶ್ರಮಿಸೋಣ ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಲಕ್ಷ್ಮಣಪ್ಪ, ಶಿವಣ್ಣಾಚಾರ್, ಕೆಂಚಣ್ಣ, ರಾಮಚಂದ್ರ, ಶಂಕರ್, ನಾಗರಾಜ್, ಗುಬ್ಬಿ ಹನುಮಂತಪ್ಪ, ಕೃಷ್ಣಮೂರ್ತಿ, ದಗ್ಗೆಶಿವಪ್ರಕಾಶ್ ಸೇರಿದಂತೆ ಮಾದಿಗ ಜನಾಂಗದ ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

# 13 ರಂದು ಮರುಳಾರಾಧ್ಯ ಶಿವಾಚಾರ್ಯ ಪುಣ್ಯ ಸ್ಮರಣೋತ್ಸವ

» **ಚಿತ್ರದುರ್ಗ**

ನಗರದ ರಂಗಯ್ಯನ ಬಾಗಿಲು ಬಳಿಯಲ್ಲಿನ ಶ್ರೀ ಉಜ್ಜಯನಿ ಮಠದಲ್ಲಿ ಲಿಂ॥ ಮರುಳಾರಾಧ್ಯ ಶಿವಾಚಾರ್ಯ ಮಹಾಭಗವತ್ಪಾದರ 29ನೇ ವರ್ಷದ ಪುಣ್ಯ ಸ್ಮರಣೋತ್ಸವ, ವಟುಗಳಿಗೆ ಲಿಂಗದೀಕ್ಷಾ ಮತ್ತು 108 ಜನ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಏ. 13 ರಂದು ನಡೆಯಲಿದೆ ಎಂದು ಉಜ್ಜಯಿನಿ ಮಠದ ಕಾರ್ಯದರ್ಶಿಗಳಾದ ಈಶ್ವರ ಪ್ರಸಾದ್ ತಿಳಿಸಿದ್ದಾರೆ.

ಏ. 13ರ ಶನಿವಾರ ಬೆಳಿಗ್ಗೆ 5 ಗಂಟೆಗೆ ಬ್ರಾಹ್ಮೀ ಮೂಹರ್ತದಲ್ಲಿ ವಟುಗಳಿಗೆ ಲಿಂಗಾದೀಕ್ಷಾ ಕಾರ್ಯಕ್ರಮ ನಡೆಯಲಿದ್ದು, ತದ ನಂತರ ಲಿಂ॥ ಜಗದ್ಗುರುಗಳ ಕತ್ತ್ರ ಗದ್ದುಗೆಗೆ ಹಾಗೂ ಶ್ರೀ ಮರುಳು ಸಿದ್ದೇಶ್ವರ ಸ್ವಾಮಿಗೆ ಮಹಾ ರುದ್ರಾಭೀಷೇಕ ಸಹಸ್ರ ಬಿಲ್ವಾರ್ಚನೆ ಮಹಾ ಮಂಗಳಾರತಿ ನಡೆಯಲಿದೆ. ಪುಣ್ಯ ಸ್ಮರಣೆಯ ಅಂಗವಾಗಿ ಶ್ರೀಮಠದ ಶಕ್ತಿ ದೇವತೆಯಾದ ಚೌಡೇಶ್ವರಿ ಅಮ್ಮನವರ ಅಪ್ಪಣೆಯ ಮೇರೆಗೆ ಬೆಳ್ಳಿಗೆ 10 ಗಂಟೆಗೆ 108 ಜನ ಮುತ್ತೈದೆಯವರಿಗೆ ಉಡಿ ತುಂಬುವ ಕಾರ್ಯವನ್ನು ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಮಧ್ಯಾಹ್ನ 12ಕ್ಕೆ ಜನಜಾಗೃತಿ ಮತ್ತು ಧರ್ಮಸಭಾ ಕಾರ್ಯಕ್ರಮದಲ್ಲಿ ಲಕ್ಷ್ಮೇಶ್ವರದ ಕರೇವಾಡಿ ಮಠದ ಶ್ರೀ ಮಳೆ ಮಲ್ಲಿಕಾರ್ಜನ ಶಿವಾಚಾರ್ಯ ಶ್ರೀಗಳು, ಮುಸ್ಟೂರಿನ ಓಂಕಾರೇಶ್ವರ ಮಠದ ಶ್ರೀ ರುದ್ರಮುನಿ ಶಿವಾಚಾರ್ಯ ಶ್ರೀಗಳು, ಮೈಸೂರಿನ ಆರಮನೆ ಜಪದಕಟ್ಟೆ ಮಠ ಹಾಗೂ ಬನ್ನಿಕೊಪ್ಪದ ಹಿರೇಮಠದ ಶ್ರೀ ಡಾ.ಸುಜ್ಞಾನದೇವ ಶಿವಾಚಾರ್ಯ ಶ್ರೀಗಳು, ಉಕ್ಕಡಗಾತ್ರಿಯ ಶ್ರೀ ಹಾಲಶಂಕರ ಶಿವಾಚಾರ್ಯ ಶ್ರೀಗಳು ಹಾಗೂ ಚಿತ್ರದುರ್ಗದ ಉಜ್ಜಯನಿಮಠದ ನಿಯೋಜಿತ ಉತ್ತರಾಧಿಕಾರಿಗಳಾದ ಅಭೀಷೇಕ ದೇವರು ದಿವ್ಯ ಸಾನಿಧ್ಯವನ್ನು ವಹಿಸಲಿದ್ದಾರೆ.

ಕಾರ್ಯ ಕ್ರಮವನ್ನು ಕರ್ನಾಟಕ ಸಂಸ್ಕೃತ ವಿಶ್ವ ವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ.ವಿ.ಗಿರೀಶ್ ಚಂದ್ರ ರವರು ಉದ್ಘಾಟನೆ ನೇರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಯೋಜನೆ ಮತ್ತು ಸಾಂಖಿಕ ಸಚಿವರಾದ ಡಿ.ಸುಧಾಕರ್, ಶಾಸಕರಾದ ಕೆ.ಸಿ.ವಿರೇಂದ್ರ, ಎಂ.ಚಂದ್ರಪ್ಪ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ನಗರಾಭೀವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಕೆ.ತಾಜ್‌ಪೀರ್, ಕರ್ನಾಟಕ ಸಂಸ್ಕೃತ ವಿಶ್ವ ವಿದ್ಯಾಲಯದ ನಿರ್ದೇಶಕರಾದ ಡಾ.ಪಾಲಯ್ಯ ಹಾಗೂ ನಗರಸಭಾ ಸದಸ್ಯರಾದ ಎನ್.ಚಂದ್ರಶೇಖರ್ ಭಾಗವಹಿಸಲಿದ್ದಾರೆ. ಲಿಂಗ ದೀಕ್ಷೆ ಮತ್ತು ಪುಣ್ಯ ಸ್ಮರಣೆಯ ಕಾರ್ಯಕ್ರಮಗಳನ್ನು ಡಾ,ವೀರೇಶ್ ಹಿರೇಮಠರವರು ನಡೆಸಿಕೊಡಲಿದ್ದಾರೆ.







Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T